MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111
ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

YUVA MARGA KANNADA DAILY NEWS PAPER

ಸಂಪುಟ: 04 | ಸಂಚಿಕೆ: 285 | ಶುಕ್ರವಾರ : 29-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 285 | FRIDAY : 29-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಉಪ ಲೋಕಾಯುಕ್ತರಿಂದ ಸಮಾಜ ಕಲ್ಯಾಣ ಇಲಾಖೆಗೆ ಭೇಟಿ

**ಯುವ ಮಾರ್ಗ ಸುದ್ದಿ**



**ರಾಯಚೂರು,ಆ.28–** ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಮಹಾನಗರ ಪಾಲಿಕೆಯ ಭೇಟಿ ನಂತರ ನೇರವಾಗಿ ರಂಗಮಂದಿರ ಹಿಂದಿನ ಸಮಾಜ ಕಲ್ಯಾಣ ಇಲಾಖೆಯ ಕಚೇರಿಗೆ ತೆರಳಿದರು.

2023ನೇ ಸಾಲಿನಿಂದ 2025ನೇ ಸಾಲಿನ ಮೂರು ವರ್ಷಗಳ ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ನೋಂದಣಿಯಾದ ವಿದ್ಯಾರ್ಥಿಗಳು ಎಷ್ಟು?

ಪಾಸಾದ ವಿದ್ಯಾರ್ಥಿಗಳು ಎಷ್ಟು? ಎಂದು ಮಾಹಿತಿ ಒದಗಿಸಬೇಕು. ಆಯಾ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ಮುಂದೇನು ಮಾಡಿದರು? ಇಲಾಖೆಯ ವಸತಿ ನಿಲಯದಲ್ಲಿ ಅವರ ಪ್ರವೇಶ ಮುಂದುವರೆಯಿತಾ? ಅಥವಾ ಇಲ್ಲ? ಈ ಬಗ್ಗೆ ಇಲಾಖೆಯಿಂದ ಯಾವ ಕ್ರಮ ಆಯಿತು? ಎಂಬುದರ ಬಗ್ಗೆ ವರ್ಷವಾರು, ಗಂಡು ಮತ್ತು ಹೆಣ್ಣು ವಿಂಗಡಣೆವಾರು ಮಾಹಿತಿ ನೀಡಬೇಕು ಎಂದು ಇದೆ ವೇಳೆ ಉಪ ಲೋಕಾಯುಕ್ತರು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಸಿಂಧೂ ಅವರಿಗೆ ಸೂಚನೆ ನೀಡಿದರು.

ಇಲಾಖೆಯ ಅಧೀನದಲ್ಲಿನ ಎಲ್ಲ ವಸತಿ ನಿಲಯಗಳು ಸರಿಯಾಗಿ ನಿರ್ವಹಣೆ ಆಗಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

## ಉಪ ಲೋಕಾಯುಕ್ತ ಬಿ.ವೀರಪ್ಪ ವಿವಿಧೆಡೆ ಅನಿರೀಕ್ಷಿತ ಭೇಟಿ; ನಾನಾ ಕಡೆ ಕ್ರಮಕ್ಕೆ ಅಧಿಕಾರಿಗಳಿಗೆ ನಿರ್ದೇಶನ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.28–**ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಪೂರ್ವ ನಿಗದಿಯಂತೆ ಆಗಸ್ಟ್ 28ರಂದು ರಾಯಚೂರ ಜಿಲ್ಲೆಗೆ ಭೇಟಿ ನೀಡಿ ಬೆಳಗ್ಗೆಯಿಂದಲೇ ಅನಿರೀಕ್ಷಿತ ಭೇಟಿ ಆರಂಭಿಸಿ ವಿವಿಧೆಡೆ ಬಿರುಸಿನ ಸಂಚಾರ ಕೈಗೊಡರು.

ಬೆಂಗಳೂರಿನಿಂದ ಉದ್ಯಾನ ಎಕ್ಸಪ್ರೆಸ್ ರೈಲು ಮೂಲಕ ಬೆಳಗ್ಗೆ 4.30ರ ವೇಳೆಗೆ ರಾಯಚೂರ ನಗರಕ್ಕೆ ಆಗಮಿಸಿದ ಲೋಕಾಯುಕ್ತರು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಹೊಸ ಅತಿಥಿ ಗೃಹಕ್ಕೆ ಆಗಮಿಸಿ ಚಹಾ ವಿರಾಮದ ನಂತರ ಬೆಂಗಳೂರನ ಲೋಕಾಯುಕ್ತ ಕಚೇರಿಯ ಅಪರ ನಿಬಂಧಕರಾದ ರಮಾಕಾಂತ ಚವ್ಹಾಣ್, ಶಿವಾಜಿ ಅನಂತ ನಲವಾಡೆ ಮತ್ತು ಉಪ ನಿಬಂಧಕರಾದ ಅರವಿಂದ ಮತ್ತು ಇನ್ನಿತರ ಅಧಿಕಾರಿಗಳೊಂದಿಗೆ ಅನಿರೀಕ್ಷಿತ ಭೇಟಿ ಕಾರ್ಯಾ ಚರಣೆಗಿಳಿದರು.



ಬೆಳಗ್ಗೆ 6.45ಕ್ಕೆ ಕೃಷಿ ಆವರಣದಿಂದ ಹೊರಟು ನೇರವಾಗಿ ಹೈದ್ರಬಾದ್ ರಸ್ತೆಯಲ್ಲಿನ ತರಕಾರಿ ಮಾರುಕಟ್ಟೆ ಆವರಣಕ್ಕೆ 7.30ರ ಸುಮಾರಿಗೆ ಭೇಟಿ ನೀಡಿದರು.

ಮಾರುಕಟ್ಟೆಯಲ್ಲಿದ್ದ ತರಕಾರಿಯ ಗುಣಮಟ್ಟ, ಮಾರಾಟದ ಪ್ರಕ್ರಿಯೆ ಬಗ್ಗೆ ಮಾಲೀಕರು ಮತ್ತು ಹಮಾಲರಿಂದ ಮಾಹಿತಿ ಪಡೆದುಕೊಂಡರು. ಕಾಯಿಪಲ್ಲೆ ಚೀಲವನ್ನು ತೂಕದ ಯಂತ್ರಗಳಲ್ಲಿಟ್ಟು ಯಂತ್ರದ ಪ್ರಮಾಣ ಪರೀಕ್ಷಿಸಿದರು.

ತರಕಾರಿ ಮಾರಾಟಗಾರ ಮಹಮ್ಮದ್ ಇಖ್ಬಾಲ್ ಅವರನ್ನು ಮಾತನಾಡಿಸಿ ತರಕಾರಿ ಮಾರಾಟದ ಬಗ್ಗೆ ಮಾಹಿತಿ ಪಡೆದುಕೊಂಡರು. ಹಮಾಲಿಗಳಿಗೆ ತಮ್ಮ ಬಳಿ ಕರೆಯಿಸಿಕೊಂಡು, ನೀವು ಇನ್ಸೂರನ್ಸ್ ಮಾಡಿಸಿದ್ದೀರಾ? ಪ್ರತಿ ದಿನ ಎಷ್ಟು ಸಂಪಾದನೆ ಮಾಡ್ತೀರಾ? ಎಂದು ಕೇಳಿದರು. ಹಮಾಲಿಗಳು ಹೆಚ್ಚಾಗಿ ಬಿಹಾರ ರಾಜ್ಯದವರಿದ್ದಾರೆ ಎಂದು ಲೇಬರ್ ಅಧಿಕಾರಿ ಶ್ರೀಹರಿ ಮಾಹಿತಿ ನೀಡಿದರು.

ಹಮಾಲಿಗಳು ನಿತ್ಯ ತಂಗುವ ಸ್ಥಳ, ಅವರಿಗೆ ನೀಡುವ ಸೌಕರ್ಯದ ಬಗ್ಗೆ ಇದೆ ವೇಳೆ ಲೋಕಾಯುಕ್ತರು ಖುದ್ದು ಪರಿಶೀಲಿಸಿದರು.


ಪ್ರತಿಯೊಬ್ಬರಿಗೂ ಗೌರವಯುತ ಜೀವನ ನಡೆಸುವ ಹಕ್ಕಿದೆ ಎಂದು ಸಂವಿಧಾನದ ಕಲಂ 21 ಹೇಳುತ್ತದೆ. ಕೂಲಿಗಳನ್ನು ಪ್ರಾಣಿಗಳಂತೆ ಕಾಣದೇ, ಕೀಳಾಗಿ ಭಾವಿಸದೇ ಅವರಿಗೆ ಸರಿಯಾದ ಸೌಕರ್ಯ ಕಲ್ಪಿಸಬೇಕು. ಆರೋಗ್ಯದ ಬಗ್ಗೆ ತಿಳಿವಳಿಕೆ ಮೂಡಿಸಿ ಎಂದು ಕೃಷಿ ಮಾರುಕಟ್ಟೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಪಿಎಂಸಿ ಬೈಲಾದಂತೆ ಫಾರ್ಮ 25 ಸರಿಯಾಗಿ ಪಾಲನೆಯಾಗಬೇಕು ಎಂದು ನಿರ್ದೇಶನ ನೀಡಿದರು. ಹಮಾಲಿಗಳಿಗೆ ಕಡ್ಡಾಯ ರಿಜಿಸ್ಟರ್ ಮಾಡಿಸಿ, ಫೋಟೊ, ದಾಖಲಾತಿ ಇಟ್ಟುಕೊಳ್ಳಬೇಕು. ಅವರಿಗೆ ಪಿಎಫ್, ವಿಮೆ ಸಿಗುವ ಹಾಗೆ ವ್ಯವಸ್ಥೆ**(2ನೇಪುಟಕ್ಕೆ)**

## ದಸರಾ ಉದ್ಘಾಟಕರ ಆಯ್ಕೆ ಬಗ್ಗೆ ರಾಜಕೀಯ ಮಾಡುವುದು ವಿಷಾದನೀಯ : ಬೋಸರಾಜು

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.28–** ಬುಕ್ಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಆಯ್ಕೆ ಮಾಡಿದ್ದು ಅವರ ಸಾಧನೆಯನ್ನು ಗುರುತಿಸಿ ಆದರೆ ಬಿಜೆಪಿ ನಾಯಕರು 'ಧರ್ಮ ರಾಜಕಾರಣ' ಮಾಡುತ್ತಿರುವುದು ವಿಷಾದನೀಯ ಎಂದು ಅವರು ಸಚಿವ ಎನ್.ಎಸ್.ಬೋಸರಾಜು ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್



ಅವರ ಪ್ರಕಾರ, ದಸರಾ ಹಬ್ಬವು ಸರ್ವಧರ್ಮದ ಹಬ್ಬವಾಗಿದ್ದು, ಜಾತಿ, ಮತ ಮತ್ತು ಪಂಥಗಳ ಗಡಿಯನ್ನು ಮೀರಿ ನಡೆಯುತ್ತದೆ. ಬಿಜೆಪಿ ಈ ರೀತಿಯ ರಾಜಕೀಯ ಮಾಡುತ್ತಿರುವುದು ರಾಜ್ಯದ ಸಂಸ್ಕೃತಿಗೆ ವಿರುದ್ಧವಾಗಿದೆ.

ಕಾಂಗ್ರೆಸ್ ಪಕ್ಷವು ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಹೆಮ್ಮೆಯ ಪಕ್ಷವಾಗಿದೆ ಎಂದು ತಿಳಿಸಿದ ಅವರು, ತಮ್ಮ ಸರ್ಕಾರವು ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆಯನ್ನು ಕಾಪಾಡುವಲ್ಲಿ ಸದಾ ಮುಂದಿರುತ್ತದೆ.ಬಿಜೆಪಿಯ ಈ ರೀತಿಯ ರಾಜಕೀಯವನ್ನು ರಾಜ್ಯದ ಜನತೆ ಎಂದಿಗೂ ಸಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

## ವಿವಿಧ ಬೇಡಿಕೆ ಈಡೇರಿಕೆಗೆ ಪೋತ್ನಾಳ್ ನಾಗರಿಕರ ವೇದಿಕೆಯಿಂದ ಮನವಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.28–**ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿ ಪೋತ್ನಾಳ್ ನಾಗರಿಕರ ವೇದಿಕೆ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ರವರಿಗೆ ಮನವಿ ಸಲ್ಲಿಸಿ ಪೋತ್ನಾಳ್ ನಾಗರಿಕರ ವೇದಿಕೆ ಸಂಚಾಲಕರಾದ ಬಸವರಾಜ ಬಾಗಲವಾಡ ಮಾತನಾಡಿ, ರಾಯಚೂರು ಮತ್ತು ಸಿಂಧನೂರು ಮುಖ್ಯ ಹೆದ್ದಾರಿಯಲ್ಲಿರುವ ಪೋತ್ನಾಳ ಗ್ರಾಮದ ಸುತ್ತಮುತ್ತಲಿನ 40ಕ್ಕೂ ಹೆಚ್ಚು ಗ್ರಾಮಗಳಿಗೆ ಕೇಂದ್ರವಾಗಿದೆ ಗ್ರಾಮ ಪಂಚಾಯಿತಿಯನ್ನು ಒಳಗೊಂಡಿದ್ದು.ಜಿಲ್ಲಾ ಪಂಚಾಯಿತಿ ಕೇತ್ರವಾಗಿದೆ ಅದ್ದರಿಂದ ಪೋತ್ನಾಳ್ ಗ್ರಾಮವನ್ನು ಹೊಬಳಿ ಕೇಂದ್ರವಾಗಿಸಬೇಕು. ಗ್ರಾಮದ ಅಭಿವೃದ್ಧಿಯಾಗುತ್ತಿಲ್ಲ. ಗ್ರಾಮದಿಂದ ಬೇರೆ ಊರುಗಳಿಗೆ ತೆರಳುವ ಪ್ರಯಾಣಿಕರಿಗೆ ಅಗತ್ಯವಾದ ಬಸ್ ನಿಲ್ದಾಣ, ತಡೆರಹಿತ ಬಸ್ಸುಗಳ ನಿಲುಗಡೆ, ಸಾಮೂಹಿಕ ಶೌಚಾಲಯ ವ್ಯವಸ್ಥೆ ಇಲ್ಲದೆ ಇರುವುದರಿಂದ ಪ್ರಯಾಣಿಕರಿಗೆ ತೊಂದರೆ ಯಾಗುತ್ತಿದೆ. ಗ್ರಾಮದ ಜನರಿಗೆ ಕುಡಿಯುವ ನೀರಿನ ತೊಂದರೆ ನಿವಾರಣೆಗೆ ಕುಡಿಯುವ ನೀರಿನ ಕೆರೆಯನ್ನು ನಿರ್ಮಾಣ ಮಾಡಬೇಕು.ಗ್ರಾಮದಲ್ಲಿ ಪದವಿ ಕಾಲೇಜು, ಪ್ರವಾಸಿ ಮಂದಿರ,ತಾಯಿ ಮಕ್ಕಳ ಆಸ್ಪತ್ರೆ, ಸಾಮುದಾಯ ಆರೋಗ್ಯಕೇ ಂದ್ರ, ಸಿಬ್ಬಂದಿಗಳಿಗೆ ವಸತಿ ಸೌಲಭ್ಯ,ಈ ಭಾಗದ ಮುನಿರಾಬಾದ್–ಮಹಿಬುಬ್ ನಗರ ರೈಲು ಮಾರ್ಗ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಪೋತ್ನಾಳ್ ಗ್ರಾಮದ ಹತ್ತಿರ ರೈಲು ನಿಲ್ದಾಣ ನಿರ್ಮಿಸಬೇಕು, ಗ್ರಾಮದ ಹತ್ತಿರ ಹರಿಯುವ ಪೋತ್ನಾಳ್ ಹಿರೆಹಳ್ಳವನ್ನು ಶುದ್ಧಿಕರಿಸಬೇಕು ಹಾಗೂ ಹಳ್ಳದಲ್ಲಿ ಅಕ್ರಮ ಮರುಳುಗಾರಿಕೆಯನ್ನು ತಡೆಯಬೇಕು, ಮುದ್ದಮಗುಂಡಿ ಏತ ನೀರಾವರಿ ಯೋಜನೆಯಿಂದ ರೈತರ ಜಮೀನಿಗೆ ನೀರು ಹರಿಸಬೇಕು. ದೇವಿಪುರ ಗ್ರಾಮದಲ್ಲಿನ ನವಗ್ರಾಮಗಳ 70ಕ್ಕೂ ಹೆಚ್ಚು ಮನೆಗಳಿಗೆ ಸಂಪರ್ಕ ರಸ್ತೆ ನಿರ್ಮಾಣ ಮಾಡಿಕೊಡಬೇಕು.ಖರಾಬದಿನ್ನಿ ಗ್ರಾಮದ ಮುಖ್ಯ ರಸ್ತೆಯಲ್ಲಿ ಬರುವ ಗುಗರಿ ಹಳ್ಳಕ್ಕೆ ಸೇತುವೆ ನಿರ್ಮಾಣ ಮಾಡಿಕೊಡಬೇಕು.ಉಟಕನೂರು ಹಾಗೂ ಬೆಳವಾಟ ಗ್ರಾಮಗಳಲ್ಲಿನ ರುದ್ರಭೂಮಿಗಳನ್ನು ಹದ್ದುಬಸ್ತು ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಮನವಿ ಸ್ವೀಕರಿಸಿ ತಹಸೀಲ್ದಾರ್ ಭೀಮರಾಯ**(2ನೇಪುಟಕ್ಕೆ)**



## ತಹಶೀಲ್ದಾರ್ ಕಚೇರಿಗೆ ಉಪ ಲೋಕಾಯುಕ್ತರು ದಿಢೀರ್ ಭೇಟಿ; ಪರಿಶೀಲನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.28–**ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ರಾಯಚೂರ ಜಿಲ್ಲಾ ಪ್ರವಾಸದ ವೇಳೆಯಲ್ಲಿ ತಹಸೀಲ್ದಾರ್ ಕಚೇರಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಮೊದಲಿಗೆ ಕಚೇರಿಯ ಸಿಬ್ಬಂದಿಯ ಹಾಜರಾತಿ ಪುಸ್ತಕ ಪರಿಶೀಲಿಸಿದರು. ಸುಧೀರ್ಘ ರಜೆ ಇರುವವರಿಗೆ ನೋಟಿಸ್ ನೀಡಲು ಸೂಚನೆ ನೀಡಿದರು.

ಎಲ್ಲ ಸಿಬ್ಬಂದಿಯು ಸರಿಯಾದ ಸಮಯಕ್ಕೆ ಕಚೇರಿಗೆ ಹಾಜರಾಗಬೇಕು. ಕಚೇರಿಯಲ್ಲಿ ಬಯೋಮೆಟ್ರಿಕ್ ಕಡ್ಡಾಯ ಬಳಸಬೇಕು. ಇದು ಪ್ರತಿ ದಿನ ಪಾಲನೆಯಾಗಬೇಕು ಎಂದು ಸಿಬ್ಬಂದಿಗೆ ತಿಳಿಸಿದರು.

ಕೆಲ ಸಿಬ್ಬಂದಿಯ ಬ್ಯಾಂಕು ವಾಹಿ



ವಾಟಿನ ವಿವರವನ್ನು ಇದೆ ವೇಳೆ ಲೋಕಾಯುಕ್ತರು ಪರಿಶೀಲಿಸಿದರು.

ತಹಸೀಲ್ದಾರ್ ಕಚೇರಿಯಲ್ಲಿ ಬಾಕಿ ಇರುವ ಕೆಲವು ಕಡತಗಳನ್ನು ಬೇಗನೆ ವಿಲೇವಾರಿ ಮಾಡಬೇಕು. ಕಚೇರಿ ವ್ಯಾಪ್ತಿಯ ರೈತರು ಕೇಳಿರುವ ಮಾಹಿತಿಯನ್ನು ನಿಗಧಿತ ಸಮಯದಲ್ಲಿ ಅವರಿಗೆ ನೀಡಬೇಕು. ಒಂದು ವೇಳೆ ನಿರ್ಲಕ್ಷ್ಯ ಮಾಡಿದಲ್ಲಿ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಉಪ ಲೋಕಾಯುಕ್ತರು ಎಚ್ಚರಿಕೆ ನೀಡಿದರು.

## ರಿಮ್ಸ್ ಆಸ್ಪತ್ರೆಯಲ್ಲಿ ಅಶುಚಿತ್ವ, ಅಶಿಸ್ತು ಕಂಡು ಉಪ ಲೋಕಾಯುಕ್ತರ ಅಸಮಾಧಾನ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.28–** ಉಪ ಲೋಕಾಯುಕ್ತರಾದ ನ್ಯಾ.ಬಿ ವೀರಪ್ಪ ಅವರು ಆಗಸ್ಟ್ 28ರಂದು ಮಧ್ಯಾಹ್ನ ವೇಳೆ ರಾಯಚೂರಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ(ರಿಮ್ಸ್)ಯ ಬೋಧಕ ಆಸ್ಪತ್ರೆಗೆ ಭೇಟಿ ನೀಡಿ ತಾಸಿಗು ಹೆಚ್ಚು ಸಮಯ ನಾನಾ ವಾರ್ಡಗಳಿಗೆ ತೆರಳಿ ಪರಿಶೀಲಿಸಿದರು.



ಆಸ್ಪತ್ರೆಯ ಪ್ರಾಂಗಣದಲ್ಲಿ, ಅಡ್ಡಾಡುವ ಸ್ಥಳದಲ್ಲಿ ರೋಗಿಗಳು ಎಲ್ಲೆಂದರಲ್ಲಿ ಕುಳಿತಿರುವುದನ್ನು ನೋಡಿದರು. ರೋಗಿಗಳಿಗೆ ಸರದಿ ಸಾಲು ಮಾಡದೇ ಚಿಕಿತ್ಸೆ ಕೊಡುತ್ತಿರುವುದನ್ನು ಕಂಡರು.

ಈ ಅಶಿಸ್ತು ಸರಿಯಲ್ಲ. ಆಸ್ಪತ್ರೆಯಲ್ಲಿ ಶಿಸ್ತು ಮತ್ತು ಸ್ವಚ್ಛತೆ ಕಾಪಾಡಿ ಎಂದು ಉಪ ಲೋಕಾಯುಕ್ತರು ಸೂಚನೆ ನೀಡಿದರು.

ಬಳಿಕ ಉಪ ಲೋಕಾಯುಕ್ತರು, ಮೊದಲಿಗೆ ಎಂ.ಆರ್.ಐ ಸ್ಕ್ಯಾನ್ ಯಂತ್ರದ ಕೊಠಡಿ ಹಾಗೂ 600 ಎಮ್‌ಎ ಕ್ಷ–ಕಿರಣ ಯಂತ್ರ ಮತ್ತು ಐಐಟಿವಿ ಕೇಂದ್ರಕ್ಕೆ ಭೇಟಿ ನೀಡಿ ಯಂತ್ರಗಳ ವೀಕ್ಷಣೆ ನಡೆಸಿ ಯಂತ್ರಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಿದರು.

ಬಳಿಕ ಮೂರನೇ ಮಹಡಿಗೆ ತೆರಳಿ ಮಕ್ಕಳ ತೀವ್ರ ನಿಗಾ ಘಟಕ, ಡೈಯಾಲಿಸಸ್ ವಿಭಾಗಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಬಳಿಕ ನಾಲ್ಕನೇ ಮಹಡಿಗೆ ತೆರಳಿ ಅಲ್ಲಿನ ಶುಚಿತ್ವದ ಬಗ್ಗೆ ಪರಿಶೀಲಿಸಿದರು. ಇದೆ ವೇಳೆ ಬಾಣಂತಿಯರ ವಿಭಾಗಕ್ಕೆ ಭೇಟಿ ಅವರ ಯೋಗಕ್ಷೇಮ ವಿಚಾರಿಸಿದರು. ಔಷಧಿ ಇಲ್ಲಿಯೇ ಕೊಡ್ತಾರಾ? ಹೊರಗಡೆ ಔಷಧಿ ಬರೆದು ಕೊಡ್ತಾರಾ? ಎಂದು ಆಸ್ಪತ್ರೆಯಲ್ಲಿನ ಔಷಧೋಪಚಾರದ ಬಗ್ಗೆ ಪರಿಶೀಲಿಸಿದರು.

ಬಾಣಂತಿಯರಿಗೆ ಉತ್ತಮ ಚಿಕಿತ್ಸೆ ನೀಡಬೇಕು. ಅವರನ್ನು ಸರಿಯಾಗಿ ಆರೈಕೆ ಮಾಡಬೇಕು. ಅವರಿಗೆ ಸಿಗುವ ಸೌಲಭ್ಯಗಳನ್ನು ತಪ್ಪದೆ ದೊರಕಿಸಲು ಕ್ರಮ ವಹಿಸಬೇಕು ಎಂದು ಉಪ ಲೋಕಾಯುಕ್ತರು ಇದೆ ವೇಳೆ ವೈದ್ಯಾಧಿಕಾರಿಗಳಿಗೆ**(2ನೇಪುಟಕ್ಕೆ)**

## ಅಪರಿಚಿತ ಮೃತ ನವಜಾತ ಹೆಣ್ಣು ಶಿಶುವಿನ ವಾರಸುದಾರರ ಪತ್ತೆಗೆ ಮನವಿ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.28–** ಇಲ್ಲಿನ ರೈಲ್ವೇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆಗಸ್ಟ್ 26ರ ಸಂಜೆ 5ಗಂಟೆ ಸುಮಾರಿಗೆ ರೈಲುಗಾಡಿ ಸಂಖ್ಯೆ: 11301 ಉದ್ಯಾನ್ ಎಕ್ಸಪ್ರೆಸ್ ಹಿಂದಿನ ಜನರಲ್ ಭೋಗಿಯ ಟಾಯಲೆಟ್ ರೂಮ್ ಒಳಗಡೆ ಸುಮಾರು 02 ರಿಂದ 03 ದಿನದ ಅಪರಿಚಿತ ನವಜಾತ ಹೆಣ್ಣು ಶಿಶುವನ್ನು ಯಾರೋ ಬಿಟ್ಟು ಹೋಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದು, ಈ ಕುರಿತು ಠಾಯಲ್ಲಿ ಸಿಆರ್ ನಂ: 31/2025ಯು/ಎಸ್ 93ಬಿಎನ್‌ಎಸ್ ರೀತ್ಯಾ ಪ್ರಕರಣ ದಾಖಲಿಸಿಕೊಂಡು ವಾರಸುದಾರರ ಪತ್ತೆಗೆ ಕೋರಲಾಗಿದೆ. ಮಗುವನ್ನು ನೋಡಿದ ದೂರುದಾರರು ಚಿಕಿತ್ಸೆ ಕುರಿತು ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೇ ಮೃತ ಹೊಂದಿರುತ್ತದೆ.

ಅಪರಿಚಿತ ಹೆಣ್ಣುಮಗು ವಯಸ್ಸು ಸುಮಾರು 02 ರಿಂದ 03 ದಿನಗಳು, ಎತ್ತರ ಸುಮಾರು 18 ಇಂಚು, ಸಾದಾ ಕೆಂಪು ಮೈ ಬಣ್ಣ, ತಲೆಯಲ್ಲಿ 01 ಇಂಚು ಕಪ್ಪು ಕೂದಲು, ಮಂಡ ಮೂಗು, ಕಣ್ಣುಗಳು ಮುಚ್ಚಿರುತ್ತವೆ. ಮೃತ ಮಗುವಿನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತ ಮಗುವಿನ ಹೋಲಿಕೆಯ ಮಗು ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532–231716 ಅಥವಾ ಮೊಬೈಲ್ ನಂ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊದಲನೇಯ ಪುಟದಿಂದ

# ಉಪ ಲೋಕಾಯುಕ್ತ ಬಿ.ವೀರಪ್ಪ ವಿವಿಧೆಡೆ ಅನಿರೀಕ್ಷಿತ ಭೇಟಿ; ನಾನಾ ಕಡೆ ಕ್ರಮಕ್ಕೆ ಅಧಿಕಾರಿಗಳಿಗೆ ನಿರ್ದೇಶನ

ಮಾಡಬೇಕು. ಇಲ್ಲದಿದ್ದಲ್ಲಿ ಕ್ರಿಮಿನಲ್ ಮೊಕದ್ದಮೆ ಎದುರಿಸಬೇಕಾಗುತ್ತದೆ ಎಂದು ಮಾಲೀಕರಿಗೆ ಎಚ್ಚರಿಕೆ ನೀಡಿದರು.

ಹಮಾಲಿಗಳೆಲ್ಲರು ಶ್ರಮದ ಕೆಲಸ ಮಾಡುತ್ತೀರಿ. ಗುಟಕಾ, ಸೀಗರೇಟು ಬಳಸಬೇಡಿ ಎಂದು ಅವರಿಗೆ ಆರೋಗ್ಯದ ಬಗ್ಗೆ ಪಾಠ ಮಾಡಿದರು.

ಅನ್ನದಾತರಾದ ರೈತರಿಗೆ ಮೋಸ ಮಾಡಬೇಡಿ ಎಂದು ಇದೆ ವೇಳೆ ಲೋಕಾಯುಕ್ತರು ಎಪಿಎಂಸಿ ತರಕಾರಿ ಮಾರುಕಟ್ಟೆ ಮಾಲೀಕರಿಗೆ ಮತ್ತು ಏಜೆಂಟರಿಗೆ ಎಚ್ಚರಿಕೆ ನೀಡಿದರು.

ಎಪಿಎಂಸಿ ಅಧಿಕಾರಿಗಳು ಇದುವರೆಗೆ ರೈತರ ಮತ್ತು ಟ್ರೇಡರ್ಸ ಸಭೆ ಮಾಡಿಲ್ಲ ಎಂದು ಲೋಕಾಯುಕ್ತರ ಎದುರು ರೈತರು ದೂರಿದರು. ಎಪಿಎಂಸಿ ಅಧಿಕಾರಿಗಳಿಗೆ ಸಭೆಗಳನ್ನು ನಿಯಮಿತವಾಗಿ ನಡೆಸಬೇಕು ಎಂದು ಲೋಕಾಯುಕ್ತರು, ಅಧಿಕಾರಿಗಳಿಗೆ ಸೂಚಿಸಿ ಅವರ ವಿಜಿಟ್ ಡೈರಿ ಪರಿಶೀಲಿಸಿದರು.

ಇಲ್ಲಿ ರೈತ ಭವನ ಇಲ್ಲ, ಹಮಾಲಿ ಕುಟುಂಬಗಳು ಇರುವ ಸ್ಥಳಕ್ಕೆ ಬಸ್ಸಿನ ಸೌಕರ್ಯ ಇಲ್ಲ ಎಂದು ಹಮಾಲಿ ಕುಟುಂಬದ ಮಹಿಳೆಯರು ಇದೆ ವೇಳೆ ಉಪ ಲೋಕಾಯುಕ್ತರ ಎದುರು ತಮ್ಮ ಅಳಲು ತೋಡಿಕೊಂಡರು. ರೈತ ಭವನ ನಿರ್ಮಾಣಕ್ಕೆ ಮತ್ತು ರಸ್ತೆ ದುರಸ್ತಿಗೆ ಕ್ರಿಯಾಯೋಜನೆಯಲ್ಲಿ ಅನುದಾನ ಮೀಸಲಿಟ್ಟು ಕಾರ್ಯಕೈಗೊಳ್ಳುವುದಾಗಿ ಎಪಿಎಂಸಿ ಅಧಿಕಾರಿಗಳು ಲೋಕಾಯುಕ್ತರಿಗೆ ಉತ್ತರಿಸಿದರು.

ಬಳಿಕ ಉಪ ಲೋಕಾಯುಕ್ತರು, ಕೈಗಾರಿಕಾ ಪ್ರದೇಶಕ್ಕೆ ಭೇಟಿ ನೀಡಿ ಟೈಮಾರ್ಕ್ಸ್ ಮತ್ತು ಹತ್ತಿರದ ವಿವಿಧ ಕಾರ್ಖಾನೆಗಳ ಬಳಿಯಲ್ಲಿ ಹರಿಯುತ್ತಿದ್ದ ಕೆಮಿಕಲ್ ಮಿಶ್ರಿತ ಕುಲುಷಿತ ನೀರು ವೀಕ್ಷಣೆ ಮಾಡಿದರು. ಇಲ್ಲಿಗೆ ತಾವು ನಿಯಮಿತ ಭೇಟಿ ನೀಡಿ ಈ ಕಲುಷಿತ ನೀರು ಎಲ್ಲಿಗೆ ಹರಿಯುತ್ತದೆ ಎಂದು ನೋಡಿದ್ದೀರಾ? ಕೆಮಿಕಲ್ ಮಿಶ್ರಿತ ಕಲುಷಿತ ನೀರು ಹರಿಸುವ ಖಾರ್ಕಾನೆಗಳಿಗೆ ನೊಟೀಸ್ ಕೊಟ್ಟಿದ್ದೀರಾ? ಎಂದು ಪರಿಸರ ಅಧಿಕಾರಿಗಳಿಗೆ ಇದೆ ವೇಳೆ ಉಪ ಲೋಕಾಯುಕ್ತರು ಪ್ರಶ್ನಿಸಿದರು. ಪರಿಸರ ಅಧಿಕಾರಿಯು ನಿರ್ಲಕ್ಷ್ಯ ವಹಿಸಿದಾಗ ಹೀಗೆ ಕೆಮಿಕಲ್ ಮಿಶ್ರಿತ ವಿಷಯುಕ್ತನೀರು ನದಿಗೆ ಹರಿದು ಜನ-ಜೀವಜಂತು ಸಾಯುವಂತಾಗುತ್ತದೆ ಎಂದು ಅಧಿಕಾರಿಗಳಿಗೆ ತರಾಟೆ ತೆಗೆದುಕೊಂಡರು.

ಇದು ಯಾವ ಪಂಚಾಯಿತಿ ವ್ಯಾಪ್ತಿಗೆ ಬರುತ್ತದೆ?. ಪಿಡಿಓ ಎಲ್ಲಿದ್ದಾರೆ? ತಾಪಂ ಇಓ ಏನು ಮಾಡ್ತಾರೆ ? ಎಂದು ಕೇಳಿ ಯದ್ಲಾಪುರ ಗ್ರಾಪಂ ಪಿಡಿಓ ಮತ್ತು ಇಓ ಮೇಲೆ ಕ್ರಮ ಜರುಗಿಸಲು ಸೂಚನೆ ನೀಡಿದರು.

ಕೆಮಿಕಲ್ ನೀರು ಹೊರಬಿಡುವ ಕಾರ್ಖಾನೆಗಳಿಗೆ ನೊಟೀಸ್ ನೀಡಿ, ಮುಚ್ಚಲು ಕ್ರಮವಹಿಸಬೇಕು ಎಂದು ಪರಿಸರ ಅಧಿಕಾರಿಗಳಿಗೆ ಇದೆ ವೇಳೆ ಲೋಕಾಯುಕ್ತರು ಸೂಚನೆ ನೀಡಿದರು.

ಬಳಿಕ ಉಪ ಲೋಕಾಯುಕ್ತರು, ಮಂಚಿಕೊಂಡ ಆಗ್ರೋ ಫುಡ್ ಕಾರ್ಖಾನೆಯಿಂದ ಹರಿಯುತ್ತಿದ್ದ ಕಲುಷಿತ ನೀರು ನೋಡಿದರು.

ಈ ಕಾರ್ಖಾನೆಗಳಿಂದ ಹೊರಬರುವ ಕಲುಷಿತ ನೀರಿನಿಂದ ಭತ್ತದ ಬೆಳೆಗೆ ಹಾನಿಯಾಗುತ್ತಿದೆ. ಜನತೆಗೆ ಚರ್ಮ ರೋಗ ಭಾದೆ ಕಾಡುತ್ತಿದೆ ಎಂದು ಸಾರ್ವಜನಿಕರು ದೂರಿದರು. ಸುತ್ತಲಿನ ಹಳ್ಳಿಗಳಲ್ಲಿ ಸಂಚರಿಸಿ ಚರ್ಮರೋಗ ಬಗ್ಗೆ ಮತ್ತು ಭತ್ತದ ಬೆಳೆಯ ಬಗ್ಗೆ ಪರಿಶೀಲಿಸಿ ಸಂಜೆಯೊಳಗೆ ವರದಿ ನೀಡಬೇಕು ಎಂದು ಚಿಕ್ಕಸಗೂರು ಪಿಡಿಓ ಅವರಿಗೆ ಉಪ ಲೋಕಾಯುಕ್ತರು ಸೂಚನೆ ನೀಡಿದರು.

ಅಲ್ಲಿಂದ ಬೆಳಗಿನ 10 ಗಂಟೆ ವೇಳೆಗೆ ಲೋಕಾಯುಕ್ತರು ಕೇಂದ್ರ ಬಸ್ ನಿಲ್ದಾಣ ಪ್ರವೇಶ ಮಾಡಿದರು. ಬಸ್ ನಿಲ್ದಾಣದ ಕ್ಯಾಂಟೀನ್ ಒಳಗಿನ ಅಡುಗೆ ಕೋಣೆಗೆ ತೆರಳಿ ತರಕಾರಿ, ದವಸ ಧಾನ್ಯಗಳ ಗುಣಮಟ್ಟ ಪರೀಕ್ಷಿಸಿದರು. ಪ್ರಯಾಣಿಕರಿಗೆ ಅನುಕೂಲವಾಗಲು ಶೌಚಾಲಯಗಳ ಬಳಿ ಕ್ಯೂಆರ್ ಕೋಡ್ ಹಾಕಿ ಅನುಕೂಲ ಕಲ್ಪಿಸಲು ಏಜೇನ್ಸಿಗಳಿಗೆ ಸೂಚನೆ ನೀಡಿದರು. ದ್ವಿಚಕ್ರ ವಾಹನ ನಿಲುಗಡೆ ಸ್ಥಳದಲ್ಲಿ ಬಸ್ ಶೆಲ್ಟರ್ ಅಳವಡಿಸಲು, ಆವರಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಇದೆ ವೇಳೆ ಉಪ ಲೋಕಾಯುಕ್ತರು ಸಾರಿಗೆ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ಎಪಿಎಂಸಿಯ ಹಮಾಲರ ಕಾಲೋನಿಗೆ ಬಸ್ ಹಾಕಲು ಸಂಜೆಯೊಳಗೆ ಆದೇಶ ಮಾಡುವುದಾಗಿ ಕೆಎಸ್ ಆರ್ ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಯು ಲೋಕಾಯುಕ್ತರಿಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಗೌರವಾನ್ವಿತ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ.ಹೆಚ್.ಎ.ಸಾತ್ವಿಕ, ಜಿಲ್ಲಾಧಿಕಾರಿ ನಿತೀಶ್ ಕೆ, ಜಿಪಂ ಸಿಇಓ ಈಶ್ವರ ಕುಮಾರ ಕಾಂದೂ, ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಬಿ.ಚಿಟುಗುಬ್ಬಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ, ರಾಯಚೂರು ಸಹಾಯಕ ಆಯುಕ್ತ ಗಜಾನನ ಬಾಳೆ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಕರ್ನಾಟಕ ಲೋಕಾಯುಕ್ತದ ಡಿಎಸ್ಪಿಗಳಾದ ರವಿ ಪುರಷೋತ್ತಮ, ವಸಂತಕುಮಾರ, ಪೊಲೀಸ್ ನಿರೀಕ್ಷಕರಾದ ಕಾಳಪ್ಪ ಬಡಿಗೇರ, ಚಂದ್ರಪ್ಪ, ಸುನಿಲ್ ಮೇಗಲಮನಿ, ಶೈಲಜಾ, ನಾಗರತ್ನ ಹಾಗೂ ಲೋಕಾಯುಕ್ತ ಕಚೇರಿಯ ಇಜ ಇತರರು ಇದ್ದರು.

# ವಿವಿಧ ಬೇಡಿಕೆ ಈಡೇರಿಕೆಗೆ ಪೋತ್ನಾಳ್ ನಾಗರಿಕರ ವೇದಿಕೆಯಿಂದ ಮನವಿ

ಬಿ.ರಾಮ ಸಮುದ್ರ ಮಾತನಾಡಿ ಗ್ರಾಮದಲ್ಲಿನ ಸಮುದಾಯ ಆರೋಗ್ಯಕೇಂದ್ರವನ್ನು ಮೇಲ್ದಾರ್ಜೆಗೆ ಏರಿಸುವುದಕ್ಕೆ ತಾ.ಆರೋಗ್ಯ ಅಧಿಕಾರಿಯೊಂದಿಗೆ ಚರ್ಚೆ ನಡೆಸಲಾಗುವುದು. ಉಟಕನೂರು ಹಾಗೂ ಬೆಳವಾಟ ಗ್ರಾಮಗಳಲ್ಲಿನ ರುದ್ರಭೂಮಿಗಳನ್ನು ಹದ್ದುಬಸ್ತು ಮಾಡುವುದಕ್ಕೆ ಕಂದಾಯ ನಿರೀಕ್ಷಕರಿಗೆ ಸೂಚನೆ ನೀಡಲಾಗುವುದು. ಅಕ್ರಮ ಮರುಳುಗಾರಿಕೆ ತಡೆಯುವುದಕ್ಕೆ ಹೆಚ್ಚಿನ ಬೀಟ್ ಪೊಲೀಸ್ ನಿಯಮಿಸುವುದಕ್ಕೆ ಮಾನ್ವಿ ಪೊಲೀಸ್ ಠಾಣೆಯ ಪಿ.ಐ. ರವರಿಗೆ ಸೂಚಿಸಲಾಗುವುದು ಪೋತ್ನಾಳ್ ಗ್ರಾಮದ ರಸ್ತೆಗಳ ಅಭಿವೃದ್ದಿಗೆ ಗ್ರಾಮ ಪಂಚಾಯಿತಿ ಹಾಗೂ ರಸ್ತೆ ಹೆದ್ದಾರಿ ಪ್ರಾಧಿಕರದ ಅಧಿಕಾರಿಗಳಿಗೆ ಪತ್ರ ಬರೆಯಲಾಗುವುದು ಪೋತ್ನಾಳ್ ಗ್ರಾಮದ ಸಮಸ್ಯೆಗಳ ನಿವಾರಣೆ ಕುರಿತು ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ನಾಗರಿಕರ ಸಭೆ ಕರೆದು ಚರ್ಚೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ನಾಡತಹಸೀಲ್ದಾರ್ ಮಲ್ಲಿಕಾರ್ಜುನ, ಕಂದಾಯ ನಿರೀಕ್ಷರಾದ ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಮುಖಂಡರಾದ ಪ್ರಭುರಾಜ್ ಕೊಡ್ಲಿ, ಶರಣ್ ಕುಮಾರ್ ಮುದ್ದಮಗುಡ್ಡಿ, ಬಸವರಾಜ್ ಬಾಗಲವಾಡ,ಪಿ.ರವಿಕುಮಾರ್, ಅನೀಲ್, ನೀಲಕಂಠ,ಶಾಂತಕುಮಾರ ಮುದ್ದಾಮಗುಡ್ಡಿ, ಬಸವರಾಜ ಕರಾಬದಿನ್ನಿ, ಏಸಪ್ಪ ಪೋತ್ನಾಳ,ಅಶೋಕ್ ತಡಕಲ್, ಅಯ್ಯಪ್ಪ ಪೋತ್ನಾಳ, ರಫಿ ಗುರುಗುಂಟ, ರಂಜಿತ್ ಉದ್ಬಳ, ಬಸವರಾಜ್ ಉದ್ಬಳ, ಚಾದಪಾಶ ಮಸ್ಕಿ,ದೇವರಾಜ್ ರಾಮತ್ನಾಳ, ಹಂಪಯ್ಯ ಇರಲಗಡ್ಡಿ, ಚನ್ನಪ್ಪ ಉಟಕನೂರು , ಚಿನ್ನಮ್ಮ ಮುದ್ಮಮಗುಡ್ಡಿ, ಗಂಗಪ್ಪ ತೋರಣದಿನ್ನಿ,

ಹಾಗೂ ಹಾಗೂ ಮಹಿಳಾ ಜಾಗೃತಿ ಸಂಘಟನೆಯ ಎಲ್ಲಾ ಪದಾಧಿಕಾರಿಗಳು,ರೈತ ಸಂಘಟನೆಗಳು ಮತ್ತು ಪ್ರಗತಿಪರ ಸಂಘಟನೆಗಳು ಹಾಗೂ ಪೋತ್ನಾಳ ಗ್ರಾಮದ ಸುತ್ತಮುತ್ತಲಿನ ಗ್ರಾಮಸ್ಥರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ರಿಮ್ಸ್ ಆಸ್ಪತ್ರೆಯಲ್ಲಿ ಅಶುಚಿತ್ವ, ಆಶಿಸ್ತು ಕಂಡು ಉಪ ಲೋಕಾಯುಕ್ತರ ಅಸಮಾಧಾನ

ಸೂಚನೆ ನೀಡಿದರು.ಬಳಿಕ ಉಪ ಲೋಕಾಯುಕ್ತರು, ಸ್ತ್ರೀರೋಗ ವಿಭಾಗಕ್ಕೆ ಭೇಟಿ ನೀಡಿ ಅಲ್ಲಿನ ಚಿಕಿತ್ಸೆಯ ಬಗ್ಗೆ ರೋಗಿಗಳೊಂದಿಗೆ ಮಾತನಾಡಿ ಮಾಹಿತಿ ಪಡೆದುಕೊಂಡರು.

ಒಬಿಜಿ ವಾರ್ಡ ನೋಡಿ ಬಳಿಕ ಮಹಿಳೆಯರ ಹೆರಿಗೆ ಹೆಚ್ಚಿನ ನಿಗಾ ಘಟಕಕ್ಕೆ ತೆರಳಿ, ಮಗು ಆರಾಮಿದೆಯಾ? ಎಂದು ಕೇಳಿ ಸರಿಯಾಗಿ ಊಟ ಮಾಡಿ ಎಂದು ಸಲಹೆ ಮಾಡಿ ತಾಯಂದಿರೊಂದಿಗೆ ಆತ್ಮೀಯವಾಗಿ ಮಾತನಾಡಿದರು.

ಬಳಿಕ ಮಕ್ಕಳ ವಾರ್ಡ್ ಮತ್ತು ಎನ್.ಆರ್.ಸಿ ವಾರ್ಡ್ ಗೆ ಭೇಟಿ ನೀಡಿ ಮಕ್ಕಳಿಗೆ ಕೊಡುವ ಆರೋಗ್ಯ ಸೌಕರ್ಯಗಳ ಬಗ್ಗೆ ಪರೀಕ್ಷಿಸಿದರು.

ಬಳಿಕ, ಪೌಷ್ಠಿಕ ಪುನರ್ವಸತಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳಿಗೆ ನೀಡುವ ಔಷಧಿ, ಅದರ ಕಾಲಾವಧಿಯ ದಿನಾಂಕ ಪರಿಶೀಲಿಸಿದರು.

ನಂತರ ಐದನೆಯ ಮಹಡಿಯ ಪುರುಷ ಶಸ್ತ್ರ ಚಿಕಿತ್ಸಾ ವಿಭಾಗಕ್ಕೆ ಭೇಟಿ ನೀಡಿ ವಾರ್ಡ್ನಲ್ಲಿ ದಾಖಲಾದ ಯಾದಗಿರಿ ಜಿಲ್ಲೆಯ ಕೋಳೂರ ಗ್ರಾಮದ ನಿವಾಸಿ ತಿಮ್ಮಪ್ಪ ಅವರೊಂದಿಗೆ ಚಿಕಿತ್ಸೆಯ ಬಗ್ಗೆ ಕೇಳಿದರು.

ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಬೇಕು. ಯಾವುದೇ ಕಾರಣಕ್ಕು ನಿರ್ಲಕ್ಷ್ಯ ಮಾಡಬಾರದು. ಆಸ್ಪತ್ರೆಯಲ್ಲಿನ ತಜ್ಞ ವೈದ್ಯರು, ವೈದ್ಯಾಧಿಕಾರಿಗಳು, ಆಡಳಿತ ವರ್ಗ ಮತ್ತು ಆರೋಗ್ಯ ಸಿಬ್ಬಂದಿಯ ಬಗ್ಗೆ ದೂರುಗಳು ಕೇಳಿ ಬಂದಲ್ಲಿ ನಿರ್ಧಾಕ್ಷಿಣ್ಯ ಕ್ರಮ ಜರುಗಿಸುವುದಾಗಿ ಇದೆ ವೇಳೆ ಉಪ ಲೋಕಾಯುಕ್ತರು ಎಚ್ಚರಿಕೆ ನೀಡಿದರು.

ಈ ವೇಳೆ ರಿಮ್ಸ್ ನಿರ್ದೇಶಕರಾದ ಡಾ.ರಮೇಶಕುಮಾರ ಬಿ.ಕೆ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು, ಜಿಲ್ಲಾ ಸರ್ಜನ್ ಡಾ.ವಿಜಯಶಂಕರ ಹಾಗೂ ಇತರರು ಇದ್ದರು.

# ಆಳಂದ: ನರೇಗಾ ಅವ್ಯವಹಾರ ಕೇಂದ್ರ ತಂಡದ ಪರಿಶೀಲನೆ



**ಆಳಂದ,ಆ.28**-ತಾಲೂಕಿನಲ್ಲಿ ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಭಾರೀ ಅವ್ಯವಹಾರ ಆಗಿದೆ ಎನ್ನುವ ದೂರಿಗೆ ಸಂಬಂಧಿಸಿದಂತೆ ಕೇಂದ್ರದ ತನಿಖಾ ತಂಡ ಆಳಂದ ತಾಲೂಕಿನಲ್ಲಿ 2 ದಿನಗಳ ಕಾಲ ಒಡಾಡಿ ಪರಿಶೀಲನೆ ನಡೆಸಿತು.

ಆಳಂದ ತಾಲೂಕಿನಲ್ಲಿ ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆಯಲ್ಲಿ ಕೈಗೊಂಡಿದ್ದ 426 ತೆರೆದ ಬಾವಿಗಳ ಕಾಮಗಾರಿಯಲ್ಲಿ ಕಾರ್ಮಿಕರನ್ನು ಬಳಸದೇ ಯಂತ್ರಗಳನ್ನು ಬಳಸಿ ಕಾಮಗಾರಿ ಮಾಡಲಾಗಿದೆಯೆಂದು, ಕಾರ್ಮಿಕರಲ್ಲದೇ ಇರುವವರ ಹೆಸರಿನ ಮೇಲೆ ಎನ್‌ಎಂಆರ್ ತೆಗೆದು ಹಣ ಲೂಟಿ ಹೊಡೆಯಲಾಗಿದೆಯೆಂದು ಹಾಗೂ ಸತ್ತವರ ಹೆಸರಿನ ಮೇಲೆ ಕಾಮಗಾರಿ ಮಂಜೂರಿ ಮಾಡಲಾಗಿದೆಯೆಂದು ಸೇರಿದಂತೆ ಅನೇಕ ಆರೋಪಗಳನ್ನು ದಾಖಲಿಸಿ ಮಾಜಿ ಶಾಸಕ ಸು ಭಾಷ ಆರ್ ಗುತ್ತೇದಾರ ಅವರು ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಗೆ ದೂರು ಸಲ್ಲಿಸಿದ್ದರು.

ದೂರಿಗೆ ಸಂಬಂಧಿಸಿದಂತೆ ತನಿಖಾ ತಂಡವು ಆಳಂದ ತಾಲೂಕಿನ ಕಡಗಂಚಿ, ಧರ್ಮವಾಡಿ, ಜಿಡಗಾ, ದೇಗಾಂವ, ನಸೀರವಾಡಿ, ಹಾಳ ತಡಕಲ ಗ್ರಾಮಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿ ಪರಿಶೀಲನೆ ನಡೆಸಿತು.

ಆಳಂದ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಕೈಗೊಂಡಿರುವ ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆಯಲ್ಲಿ ನಿಯಮಾವಳಿಗಳನ್ನು ಮೀರಿ ವ್ಯಾಪಕ ಭೃಷ್ಟಾಚಾರ ಎಸಗಲಾಗಿದೆ. ಕಾರ್ಮಿಕರನ್ನು ಬಳಸದೇ ಯಂತ್ರಗಳನ್ನು ಬಳಸಿ ನರೇಗಾ ಅಡಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಗ್ರಾಮದಲ್ಲಿ ವಾಸ ಆಗದೆ ಇರುವವರ ಹೆಸರನ್ನು, ವಿದ್ಯಾರ್ಥಿಗಳ ಹೆಸರನ್ನು, ಅರೆ ಸರ್ಕಾರಿ ನೌಕರರ ಹೆಸರನ್ನು, ಹೊರ ರಾಜ್ಯ ದಲ್ಲಿ ವಾಸವಾಗಿರುವವರ ಹೆಸರನ್ನು, ವಿದೇಶದಲ್ಲಿ ವಾಸವಾಗಿರುವವರ ಹೆಸರನ್ನು ಹಾಜರಿಯಲ್ಲಿ ಹಾಕಿ ವ್ಯಾಪಕ ಭೃಷ್ಟಾಚಾರ ಎಸಗಲಾಗಿದೆ. ಕೇವಲ ತಮ್ಮ ಪಕ್ಷದ ಮುಖಂಡರ, ಕಾರ್ಯಕರ್ತರ ಹೊ ಲಗಳಲ್ಲಿ ಕಾಮಗಾರಿಗಳನ್ನು ಇಟ್ಟು ಕಾಮಗಾರಿ ಗಳನ್ನು ಮಾಡಲಾಗಿದೆ ಎಂದು ದೂರಲಾಗಿತ್ತು.

ಕಾಮಗಾರಿಗಳನ್ನು ಕೇವಲ ಕಾಗದದಲ್ಲಿ ತೋರಿಸಿ, ಹಣವನ್ನು ದುರುಪಯೋಗ ಮಾಡಲಾಗಿದೆ. ಇಂತಹ ಭ್ರಷ್ಟಾಚಾರವನ್ನು ತಡೆಯಲು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಸಾರ್ವಜನಿಕ ನಿಗಾವಳಿ ಮತ್ತು ಸಾಮಾಜಿಕ ಪರಿಶೀಲನೆಗಳನ್ನು ಪ್ರೋತ್ಸಾಹಿಸಲಾಗುತ್ತದೆ. ಸಾಮಾಜಿಕ ಪರಿಶೀಲನೆಗಳ ಮೂಲಕ ಯೋಜನೆಯ ಕಾರ್ಯಕ್ಷಮತೆ ಮತ್ತು ನಿಖರತೆಯನ್ನು ಪರಿಶೀಲಿಸಬೇಕು ಎಂದು ಮಾಜಿ ಶಾಸಕ ಸುಭಾಷ್ ಗುತ್ತೇದಾರ ವಿನಂತಿಸಿದರು.

# ರಾಯಚೂರಿನಲ್ಲಿ 13 ಸ್ವಯಂ ಪ್ರೇರಿತ ದೂರು ದಾಖಲಿಸಿದ ಉಪ ಲೋಕಾಯುಕ್ತರಾದ ಬಿ ವೀರಪ್ಪ


**ಯುವ ಮಾರ್ಗ ಸುದ್ದಿ**

**ರಾಯಚೂರು ಆಗಸ್ಟ್ 28**- ರಾಯಚೂರು ಪ್ರವಾಸದಲ್ಲಿರುವ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ ವೀರಪ್ಪ ಅವರು ಆಗಸ್ಟ್ 28ರಂದು ಕೈಗೊಂಡ ಅನಿರೀಕ್ಷಿತ ಭೇಟಿ ವೇಳೆ ಒಟ್ಟು 13 ಸ್ವಯಂ ಪ್ರೇರಿತ ದೂರುಗಳನ್ನು ದಾಖಲಿಸಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಅಧೀನದ ತರಕಾರಿ ಮಾರುಕಟ್ಟೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧೀನದ ಕೈಗಾರಿಕಾ ಪ್ರದೇಶ, ಕೆಕೆಆರ್ ಟಿಸಿಯ ಕೇಂದ್ರ ಬಸ್ ನಿಲ್ದಾಣ, ರಿಮ್ಸ್ ಆಸ್ಪತ್ರೆ, ರಾಯಚೂರು ತಾಲೂಕು ತಹಸೀಲ್ದಾರ ಕಚೇರಿ, ಎಡಿಎರ್ ಕಚೇರಿ, ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಉಪ ನೋಂದಣಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನಿರ್ಮಿತಿ ಕೇಂದ್ರ, ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಚೇರಿಗಳಿಗೆ ಭೇಟಿ ನೀಡಿ ಕಚೇರಿಗಳಲ್ಲಿನ ಕೆಲವು ಅಧಿಕಾರಿಗಳು ಮತ್ತು ಸಿಬ್ಬಂದಿಯ ಕರ್ತವ್ಯಲೋಪದ ಬಗ್ಗೆ ಒಟ್ಟು 13 ಸ್ವಯಂ ಪ್ರೇರಿತ ದೂರುಗಳನ್ನು ದಾಖಲಿಸಿದರು.

# ಭಾರಿ ಮಳೆ ಶಾಲಾ- ಕಾಲೇಜಿಗೆ ರಜೆ

**ಬೆಂಗಳೂರು, ಆ.28**- ಭಾರೀ ಮಳೆಯ ಹಿನ್ನಲೆಯಲ್ಲಿ ದಕ್ಷಿಣ ಕನ್ನಡ, ಉತ್ತರ ಕನ್ನಡ ಹಾಗೂ ಶಿವಮೊಗ್ಗ ವ್ಯಾಪ್ತಿಯ ಶಾಲಾ ಕಾಲೇಜಿಗಳಿಗೆ ಇಂದು ರಜೆ ಘೋಷಣೆ ಮಾಡಲಾಗಿದೆ.



ಮಂಗಳೂರು,ಬಂಟ್ವಾಳ ಮತ್ತು ಉಳ್ಳಾಲ ತಾಲೂಕಿನ ಎಲ್ಲಾ ಶಾಲೆ ಮತ್ತು ಪಿಯು ಕಾಲೇಜುಗಳಿಗೆ ಹಾಗೂ ಮುಲ್ಕಿ, ಮೂಡುಬಿದಿರೆ, ಪುತ್ತೂರು ತಾಲೂಕಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಆ.28ರ ಗುರುವಾರ ರಜೆ ಘೋಷಿಸಲಾಗಿದೆ.

ಶಿವಮೊಗ್ಗ ಜಿಲ್ಲೆಯ ಸಾಗರ ಹಾಗೂ ಹೊಸನಗರ ತಾಲೂಕುಗಳ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ತಾಲೂಕು ಆಡಳಿತ ರಜೆ ಘೋಷಿಸಿ ಆದೇಶ ಹೊರಡಿಸಲಾಗಿದೆ.

ಆದರೆ ಪದವಿ ಕಾಲೇಜುಗಳು ಎಂದಿನಂತೆ ನಡೆಯಲಿವೆ. ಈ ಕುರಿತು ಹೊಸನಗರ ಹಾಗೂ ಸಾಗರ ತಾಲೂಕುಗಳ ತಹಶೀಲ್ದಾರರು ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಎರಡು ತಾಲೂಕುಗಳಲ್ಲಿ ಪ್ರತಿ ವರ್ಷ ಉತ್ತಮ ಮಳೆಯಾಗುತ್ತದೆ. ಮಳೆಯಿಂದ ವಿದ್ಯಾರ್ಥಿಗಳಿಗೆ ಅನಾನುಕೂಲ ಆಗಬಹುದೆಂಬ ಹಿನ್ನೆಲೆಯಲ್ಲಿ, ತಾಲೂಕು ಆಡಳಿತಗಳು ತಮ್ಮ ವ್ಯಾಪ್ತಿಯ ಎಲ್ಲಾ ಅಂಗನವಾಡಿ, ಶಾಲಾ-ಕಾಲೇಜುಗಳಿಗೆ ರಜೆ ಘೋಷಣೆ ಮಾಡಿವೆ. ಹೀಗಾಗಿ, ಮುಂದಿನ ದಿನಗಳಲ್ಲಿ ಶನಿವಾರದಂದು ಪೂರ್ಣ ತರಗತಿಗಳನ್ನು ನಡೆಸಲಾಗುವುದೆಂದು ತಿಳಿಸಲಾಗಿದೆ.

ಉತ್ತರ ಕನ್ನಡ: ಉತ್ತರ ಕನ್ನಡ ಜಿಲ್ಲೆಯಲ್ಲೂ ಭರ್ಜರಿ ಮಳೆಯಾಗುತ್ತಿದ್ದು, ನಿನ್ನೆ ಮತ್ತು ಇಂದು ರೆಡ್ ಅಲರ್ಟ್ ಘೋಷಿಸಲಾಗಿದೆ. ಮಕ್ಕಳ ಸುರಕ್ಷತಾ ಹಿತದೃಷ್ಟಿಯಿಂದ ಜಿಲ್ಲೆಯ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ಶಿರಸಿ, ಸಿದ್ದಾಪುರ, ಯಲ್ಲಾಪುರ, ಜೋಯಿಡಾ ಹಾಗೂ ದಾಂಡೇಲಿ ತಾಲೂಕುಗಗಳ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಇಂದು ರಜೆ ನೀಡಲಾಗಿದೆ.

ಈ ರಜಾ ಅವಧಿಯನ್ನು ಮುಂದಿನ ದಿನಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದಾಗಿ ಪ್ರಕಟಣೆ ಹೊರಡಿಸಲಾಗಿದೆ. ಇತ್ತ ಹವಾಮಾನ ಇಲಾಖೆ ರಾಜ್ಯದಲ್ಲಿ ಆಗಸ್ಟ್ 27ರಿಂದ ಮತ್ತೆ ಮಳೆ ಹೆಚ್ಚಾಗಲಿದೆ ಎಂದು ಮುನ್ಸೂಚನೆ ನೀಡಿತ್ತು. ಮುನ್ಸೂಚನೆ ಪ್ರಕಾರ ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ, ಬೆಳಗಾವಿ, ಬೀದರ್, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಹಾಗೆಯೇ, ಸೆ.1ರ ವರೆಗೂ ಮಳೆ ಬೀಳುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿತ್ತು. ಆದರೆ ಉತ್ತರ ಕನ್ನಡ ಹಾಗೂ ಶಿವಮೊಗ್ಗ ಜಿಲ್ಲೆಯಲ್ಲಿ ನಿರೀಕ್ಷೆಗೂ ಅಧಿಕ ಮಳೆಯಾಗುತ್ತಿದೆ.

# ಮಳೆ ಹಾನಿ ಪರಿಹಾರಕ್ಕೆ ನಾಗರಿಕರ ಆಗ್ರಹ

**ಜೇವರಗಿ,ಆ.28**- ಪಟ್ಟಣದ ವಾರ್ಡ್ ನಂ. 1ರ ಬುಗ್ಗಿ ಏರಿಯಾದಲ್ಲಿ ತಡರಾತ್ರಿ ಸುರಿದ ಭಾರಿ ಮಳೆಯಿಂದಾಗಿ ಮನೆ, ಕಿರಾಣಿ ಅಂಗಡಿ, ದನದ ಕೊಟ್ಟಿಗೆ, ಮನೆಯ ಮುಂದೆ ನಿಲ್ಲಿಸಿದ ಆಟೋ ಬೈಕ್ ಟ್ಯಾಕ್ಟರ್, ಜಾನುವಾರಗಳು ನೀರಲ್ಲಿ ಸಂಪೂರ್ಣ ಜಲಾವೃತ್ತಗೊಂಡು, ಜನಜೀವನ ಸಂಪೂರ್ಣ ಅಸ್ವಸ್ಥಗೊಂಡಿದೆ, ಕೂಡಲೆ ತಾಲೂಕ ಆಡಳಿತ ಪರಿಹಾರ ಹಾಗೂ ಮನೆಗಳು ಸ್ಥಳಾಂತರ ಮಾಡಬೇಕೆಂದು ಟಿಪ್ಪು ಸುಲ್ತಾನ ಸಮಿತಿ ತಾಲೂಕ ಅಧ್ಯಕ್ಷ ಮೈನೋದ್ದೀನ್ ಇನಾಮ್ದಾರ ಆಗ್ರಹಿಸಿದ್ದಾರೆ. ಸ್ಥಳೀಯ ನಿವಾಸಿ ಸುರೇಶ್ ಹಿರೇಮಠ್ ಮಾತನಾಡಿ ಜನ ಅಧಿಕಾರಿಗಳ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ, ಇಲ್ಲಿನ ಸೇತುವೆ ಚಿಕ್ಕದಾಗಿದ್ದು ಪ್ರತಿ ಸಾರಿ ಮಳೆಯಾದಾಗ ಹಳ್ಳದಲ್ಲಿ ಪ್ರವಾಹ ಉಂಟಾಗುತ್ತದೆ, ಹಳ್ಳದ ಸೇತುವೆ ಒಳಗಡೆ ಹೂಳು ತುಂಬಿಕೊಂಡು, ನೀರು ಸುಗಮವಾಗಿ ಹರಿಯಲು ಆಗದೆ ಇಲ್ಲಿನ ಸುತ್ತಮುತ್ತಲಿನ ಮನೆಗಳಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಹಾನಿ ಉಂಟು ಮಾಡಿದೆ, ಕಿರಾಣಿ ಅಂಗಡಿಯಲ್ಲಿನ ರೆಫ್ರಿಜರೇಟರ್, ಟಿವಿ, ಮಾರಾಟದ ವಸ್ತುಗಳು, ಮತ್ತು ಮನೆಗಳಲ್ಲಿನ ದವಸ ಧಾನ್ಯ ಎಲ್ಲವೂ ಕೂಡ ನೀರು ಪಾಲಾಗಿದ್ದು ಸ್ಥಳೀಯರ ಪರಿಸ್ಥಿತಿ ಹೇಳತೀರದು. ಕೂಡಲೇ ಸರ್ಕಾರ ಪರಿಹಾರ ನೀಡಬೇಕು ಎಂದು ಮನವಿ ಮಾಡಿದರು.ಇಲ್ಲಿನ ಸ್ಥಳೀಯರು ಶಾಸಕ,



ಜಿಲ್ಲಾಧಿಕಾರಿ,ತಾಲೂಕು ದಂಡಾಧಿಕಾರಿಗಳಿಗೆ ಫೋನ್ ಕರೆ ಮಾಡಿದರು ಕರೆಯನ್ನು ಸ್ವೀಕರಿಸದೆ ನಿರ್ಲಕ್ಷ ತೋರಿದ್ದಾರೆ. ಹಳ್ಳದಲ್ಲಿ ನೀರಿನ ಪ್ರಮಾಣ ಕಡಿಮೆಯಾಗುವವರೆಗೂ ಇಲ್ಲಿನ ಸ್ಥಳೀಯ ಜನರಿಗೆ ಬೇರೆಡೆ ವ್ಯವಸ್ಥೆ ಮಾಡಿಕೊಡಬೇಕೆಂದು ಆಗ್ರಹಿಸಿದರು

ಸ್ಥಳೀಯರಾದ ಅಶೋಕ್ ನಾಟಿಕರ್, ವಿಶ್ವರಾಧ್ಯ ಸುಬೇದಾರ್, ಅಂಬವ್ವ ಸುಬೇದಾರ್, ಮಲ್ಲಮ್ಮ ನಾಟೀಕರ, ದೇವಕಿ ಸುಬೇದಾರ್, ಮಲ್ಲಮ್ಮ ಸುಬೇದಾರ್, ನಾಗಮ್ಮ ಸುಬೇದಾರ್ ಸೇರಿ ಅನೇಕರು ಪರಿಹಾರಕ್ಕೆ ಒತ್ತಾಯಿಸಿದ್ದಾರೆ.

# ಸುಂಕಾಸ್ತ್ರಕ್ಕೆ ಮೋದಿ ಕಾರ್ಯತಂತ್ರ

**ನವದೆಹಲಿ, ಆ. 28–** ಭಾರತದ ಉತ್ಪನ್ನಗಳಿಗೆ ಶೇ. 50 ರಷ್ಟು ತೆರಿಗೆ ವಿಧಿಸುವ ಅಮೆರಿಕಾದ ನಿರ್ಧಾರದಿಂದ ಆಗುವ ಪರಿಣಾಮಗಳನ್ನು ಎದುರಿಸಲು ಭಾರತ ಹಲವು ಸುಧಾರಣಾ ಕ್ರಮಗಳನ್ನು ಜಾರಿಗೊಳಿಸಲು ಮುಂದಾಗಿದ್ದು, ಜಿಎಸ್‌ಟಿ ಕಡಿತ, ಸ್ವದೇಶಿ ಮಂತ್ರ ಜಪ, ರೈತರು ಹಾಗೂ ಸಣ್ಣ ಕೈಗಾರಿಕೆಗಳ ಸಬಲೀಕರಣಗಳಿಗೆ ಒತ್ತು ನೀಡಿದೆ. ಜತೆಗೆ ಸ್ವ ಕೇಂದ್ರೀತ ಆರ್ಥಿಕ ನೀತಿಯ ಮಂತ್ರವನ್ನು ಜಪಿಸಿದೆ.

ಭಾರತದ ಮೇಲೆ ಶೇ. 50 ರಷ್ಟು ಸುಂಕಗಳನ್ನು ಅಮೆರಿಕಾದ ಟ್ರಂಪ್ ಆಡಳಿತ ಬುಧವಾರದಿಂದ ಜಾರಿ ಮಾಡಿದೆ. ಇದರಿಂದ ಭಾರತದ ಆರ್ಥಿಕತೆ ಮೇಲೆ ಯಾವುದೇ ಪರಿಣಾಮಗಳು ಆಗದಂತೆ ಭಾರತ ತನ್ನದೇ ಆದ ಕಾರ್ಯತಂತ್ರಗಳನ್ನು ರೂಪಿಸಿ, ಆರ್ಥಿಕ ಬೆಳವಣಿಗೆಗಳನ್ನು ಹೆಚ್ಚಿಸಲು ಜಿಎಸ್‌ಟಿ ಪುನರಾಚನೆ ಸೇರಿದಂತೆ ಹಲವು ಸುಧಾರಣಾ ಕ್ರಮಗಳನ್ನು ಜಾರಿಗೊಳಿಸುತ್ತಿದೆ.ಅಮೆರಿಕಾದ ಸುಂಕಾಸ್ತ್ರವನ್ನು ಎದುರಿಸಿ ಭಾರತದ ಆರ್ಥಿಕತೆಗೆ ಯಾವುದೇ ತೊಂದರೆಗಳಾಗದಂತೆ ನೋಡಿಕೊಳ್ಳುವ ಸಂಬಂಧ ಪ್ರಧಾನಿ ಮೋದಿ ಅವರು ತಮ್ಮ ಆರ್ಥಿಕ ಸಲಹಾ ಮಂಡಳಿಯ ಸಭೆ ನಡೆಸಿ, ಚರ್ಚೆ ನಡೆಸಿದ್ದು, ಟ್ರಂಪ್ ಅವರ ಸುಂಕದ ಬೆದರಿಕೆಗಳನ್ನು ಎದುರಿಸಲು ವ್ಯವಹಾರಗಳನ್ನು ಸುಗಮಗೊಳಿಸಿ ಹೂಡಿಕೆಗಳನ್ನು ಆಕರ್ಷಿಸಲು ಕೆಲವು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ.

ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸುವ ಮತ್ತು ರಷ್ಯಾದ ಕಚ್ಚಾತೈಲವನ್ನು ಖರೀದಿಸುವಲ್ಲಿ ತನ್ನ ಕಾರ್ಯತಂತ್ರದ ಸ್ವಾಯತತ್ತೆಯನ್ನು ಕಾಪಾಡುವ ಹಕ್ಕನ್ನು ಪ್ರತಿಪಾದಿಸುವ ಮೂಲಕ ಹೆಚ್ಚಿನ ಸುಂಕಗಳ ಪರಿಣಾಮಗಳನ್ನು ಎದುರಿಸಲು ಸರ್ವ ಸಿದ್ಧತೆಗಳನ್ನು ಮಾಡಿಕೊಂಡಿದೆ.ಭಾರತದಲ್ಲೇ ತಯಾರಾದ ಉತ್ಪನ್ನಗಳಿಗೆ ದೇಶದಲ್ಲಿ ಬೇಡಿಕೆ ಹೆಚ್ಚಿಸಿ ಆರ್ಥಿಕ ಬೆಳವಣಿಗೆಯನ್ನು ಸಾಧಿಸಲು ಭಾರತ ಹಲವು ಸುಧಾರಣಾ ಕ್ರಮಗಳನ್ನು ಮುಂದಿನ ದಿನಗಳಲ್ಲಿ ಜಾರಿ ಮಾಡಲಿದೆ.

ಆರ್ಥಿಕ ವಿಶ್ವಾಸ ಮತ್ತು ಬೆಳವಣಿಗೆಯನ್ನು ಹೆಚ್ಚಿಸಲು ಕೇಂದ್ರ ಸರ್ಕಾರ ಜಿಎಸ್‌ಟಿ ಪುನಾರಚನೆ ಸೇರಿದಂತೆ ಹಲವು ನೀತಿ ಸುಧಾರಣಾ ಕ್ರಮಗಳನ್ನು ಜಾರಿಗೊಳಿಸುವ ಕಾರ್ಯಕ್ಕೆ ವೇಗ ನೀಡಿದ್ದು, ಹೂಡಿಕೆಯನ್ನು ಆಕರ್ಷಿಸಲು ಸಂಕೀರ್ಣ ಸುಧಾರಣೆಗಳನ್ನು ಪರಿಹರಿಸಲು ಮುಂದಾಗಿದೆ.

**ಜಿಎಸ್‌ಟಿ ಪುನಾರಚನೆ:** ಆರ್ಥಿಕತೆಯನ್ನು ಬಲಗೊಳಿಸಲು ಜಿಎಸ್‌ಟಿ ಪುನಾರಚನೆಗೂ ತೀರ್ಮಾನ ಮಾಡಲಾಗಿದ್ದು, ಈಗ ಇರುವ ನಾಲ್ಕು ಹಂತಗಳ ಜಿಎಸ್‌ಟಿ ಸ್ಲ್ಯಾಬ್‌ಗಳನ್ನು ಬದಲಿಸಿ ಎರಡು ಹಂತಗಳ ಜಿಎಸ್‌ಟಿ ಸ್ಲ್ಯಾಬ್‌ಗಳನ್ನು ಜಾರಿ ಮಾಡುವ ಮೂಲಕ ಸ್ವದೇಶಿ ನಿರ್ಮಿತ ಉತ್ಪನ್ನಗಳ ಮಾರಾಟವನ್ನು ಹೆಚ್ಚಿಸಿ ಆರ್ಥಿಕತೆಯನ್ನು ಬಲಗೊಳಿಸುವ ಗುರಿಯನ್ನು ಹೊಂದಲಾಗಿದೆ.

ಪ್ರಸ್ತುತ ಶೇ. 5, ಶೇ. 12, ಶೇ. 18 ಮತ್ತು ಶೇ. 28 ಹೀಗೆ ನಾಲ್ಕು ಹಂತಗಳ ಜಿಎಸ್‌ಟಿ ಸ್ಲ್ಯಾಬ್ ಇದ್ದು ಇದನ್ನು ಸರಳೀಕರಿಸಿ ಎರಡು ಹಂತಗಳ ಜಿಎಸ್‌ಟಿ ಸ್ಲ್ಯಾಬ್ ರಚಿಸಿ ಶೇ. 5 ರಿಂದ ಶೇ. 18 ಜಿಎಸ್‌ಟಿ ವಿಧಿಸುವ ಎರಡು ಸ್ಲ್ಯಾಬ್ ಜಾರಿ ಮಾಡಲು ನಿರ್ಧರಿಸಿದೆ.. ಈ ಬಗ್ಗೆ ಬರುವ ಸೆಪ್ಟೆಂಬರ್ 3 ಮತ್ತು 4 ರಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ನೇತೃತ್ವದಲ್ಲಿ ನಡೆಯುವ ಜಿಎಸ್‌ಟಿ ಮಂಡಳಿಯ ಸಭೆಯಲ್ಲಿ ಎರಡು ಹಂತಗಳ ಜಿಎಸ್‌ಟಿ ಸ್ಲ್ಯಾಬ್‌ಗೆ ಅನುಮೋದನೆ ಪಡೆಯುವ ಸಿದ್ಧತೆಯನ್ನು ಕೇಂದ್ರ ಸರ್ಕಾರ ಮಾಡಿಕೊಂಡಿದೆ.

ಸೆಪ್ಟೆಂಬರ್ 3 ಮತ್ತು 4 ರಂದು ನಡೆಯಲಿರುವ ಜಿಎಸ್‌ಟಿ ಕೌನ್ಸಿಲ್ ಸಭೆಯು ಸಿಮೆಂಟ್, ಟೂತ್‌ಪೇಸ್ಟ್, ಟೂತ್ ಬ್ರಶ್ ಸೇರಿದಂತೆ ನಿತ್ಯ ಬಳಕೆಯ ಹಲವು ವಸ್ತುಗಳ ತೆರಿಗೆಯನ್ನು ಕಡಿಮೆ ಮಾಡುವ ತೀರ್ಮಾನವನ್ನು ಕೈಗೊಳ್ಳುವ ಸಾಧ್ಯತೆ ಇದೆ. ಇದರ ಜತೆಗೆ ವಿಮೆಗಳ ಮೇಲೆ ವಿಧಿಸುವ ತೆರಿಗೆ ಕಡಿತ, ಆಹಾರ ಮತ್ತು ಜವಳಿ ಉತ್ಪನ್ನಗಳನ್ನು ಶೇ. 5ರ ತೆರಿಗೆ ವ್ಯಾಪ್ತಿಗೆ ತರುವ ಬಗ್ಗೆಯೂ ತೀರ್ಮಾನಗಳನ್ನು ಕೈಗೊಳ್ಳಲಿದ್ದು, ಇದರಿಂದ ದೇಶದಲ್ಲಿ ಸ್ವದೇಶಿ ನಿರ್ಮಿತ ವಸ್ತುಗಳ ಮಾರಾಟ ಹೆಚ್ಚಾಗುವ ಜತೆಗೆ ಆರ್ಥಿಕ ಬೆಳವಣಿಗೆಯೂ ವೇಗ ಪಡೆದುಕೊಳ್ಳಲಿದೆ ಎಂದು ಕೇಂದ್ರ ಸರ್ಕಾರ ಪ್ರತಿಪಾದಿಸಿದೆ.

ರಾಷ್ಟ್ರೀಯ ಸ್ವಾವಂಬನೆ ಮತ್ತು ಅಭಿವೃದ್ಧಿ ಸಾಧಿಸಲು ನಾಗರಿಕರು ಭಾರತದಲ್ಲೇ ತಯಾರಾಗುವ ಉತ್ಪನ್ನಗಳನ್ನು ಖರೀದಿಸಬೇಕು ಎಂದು ಕರೆ ನೀಡಿರುವ ಪ್ರಧಾನಿ ಮೋದಿ ಅವರು, ಅಂಗಡಿಗಳು



ಮತ್ತು ಸರಕು ಮಾರಾಟ ಮಾಡುವ ವ್ಯಾಪಾರಿಗಳು ವಿದೇಶಿ ವಸ್ತುಗಳನ್ನು ಮಾರಾಟ ಮಾಡದೆ ಸ್ವದೇಶಿ ವಸ್ತುಗಳನ್ನು ಮಾರಾಟ ಮಾಡಿದರೆ ಮೇಕ್ ಇನ್ ಇಂಡಿಯಾ ಆಂದೋಲನಕ್ಕೆ ಭಾರಿ ಉತ್ತೇಜನ ಸಿಗುತ್ತದೆ. ಜತೆಗೆ ಪ್ರತಿಯೊಬ್ಬರು ಭಾರತದ ಸ್ವಾವಬಂಲನೆಗೆ ಸಣ್ಣ ಸಣ್ಣ ಕೊಡುಗೆಗಳನ್ನು ನೀಡಿದಂತಾಗುತ್ತದೆ. ಹಾಗೆಯೇ ಬಾಹ್ಯ ಒತ್ತಡಗಳ ವಿರುದ್ಧ ಭಾರತ ಸದೃಢವಾಗಿ ನಿಲ್ಲಲು ಈ ಉಪಕ್ರಮಗಳು ನೆರವಾಗುತ್ತವೆ ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ.

ರೈತರು, ಜಾನುವಾರು ಸಾಕಾಣೆದಾರರು ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳ ಹಿತಾಸಕ್ತಿಗಳನ್ನು ಕಾಪಾಡಲು ನಾವು ಬದ್ಧರಿದ್ದೇವೆ. ನಮ್ಮ ಮೇಲಿನ ಒತ್ತಡ ಹೆಚ್ಚಾಗಬಹುದು. ಆದರೆ ಅದನ್ನೆಲ್ಲಾ ಸಮರ್ಥವಾಗಿ ಎದುರಿಸುತ್ತೇವೆ ಎಂದು ಮೋದಿ ಹೇಳುವ ಮೂಲಕ ಟ್ರಂಪ್ ಒತ್ತಡಕ್ಕೆ ಭಾರತ ಮಣಿಯುತ್ತಿಲ್ಲ ಎಂಬ ಸಂದೇಶವನ್ನು ರವಾನಿಸಿದ್ದಾರೆ.

ಕಳೆದ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆ ಭಾಷಣದಲ್ಲೂ ಪ್ರಧಾನಿ ಮೋದಿ ಅವರು ಮುಂದಿನ ಪೀಳಿಗೆಗಳ ಸುಧಾರಣೆ ಬಗ್ಗೆ ಮಾನಾಡಿ, ವ್ಯವಹಾರ ಅನುಸರಣೆಯ ವೆಚ್ಚವನ್ನು ಕಡಿಮೆ ಮಾಡಲು ಮತ್ತು ಅನಗತ್ಯ ಶಾಸನಗಳನ್ನು ತೆಗೆದು ಹಾಕಲು ಸುಧಾರಣೆಗಳನ್ನು ಜಾರಿ ಮಾಡಲಾಗುತ್ತಿದೆ ಎಂದು ಹೇಳಿ, ಸ್ವ ಕೇಂದ್ರೀತ ಆರ್ಥಿಕ ನೀತಿಗಳ ಬಗ್ಗೆ ಪ್ರಸ್ತಾಪಿಸಿದ್ದರು

## ಶಿಕ್ಷಕರು ಕರ್ತವ್ಯ ಮತ್ತು ಸಮಯಪ್ರಜ್ಞೆ ಅರಿತವರಾಗಿರಬೇಕು



**ಅಫಜಲಪುರ:ಅ.28–**ತಾಲೂಕಿನ ಮಾಶಾಳ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಪ್ರಭಾರಿ ಮುಖ್ಯ ಗುರುಗಳಾಗಿ ಸೇವೆ ಸಲ್ಲಿಸಿ ಸೇವಾ ನಿವೃತ್ತಿ ಹೊಂದಿರುವ ಮಲ್ಲಿಕಾರ್ಜುನ ಪಾರಗೊಂಡ ಹಾಗೂ ಸ.ಕ.ಹಿ.ಪ್ರಾ.ಶಾಲೆ ಕುಡಿಗನೂರ ಮುಖ್ಯ ಗುರುಗಳಾಗಿ ಸೇವಾ ನಿವೃತ್ತಿ ಹೊಂದಿರುವ ಧರೆಪ್ಪ ಹಲಸಂಗಿ ಅವರುಗಳಿಗೆ ಮಾಶಾಳದ ಶ್ರೀ ಮಲ್ಲಿಕಾರ್ಜುನ ಪಾರಗೊಂಡ ರವರ ಮನೆಯಲ್ಲಿ ಆಳಂದ ತಾಲೂಕಿನ ಅಂಬೇವಾಡ ಗ್ರಾಮದ ಮುಖ್ಯ ಗುರುಗಳ ವತಿಯಿಂದ ಸನ್ಮಾನ ಸಮಾರಂಭ ಜರುಗಿತು.ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿ ಮಲ್ಲಿಕಾರ್ಜುನ ಪಾರಗೊಂಡ ಮಾತನಾಡಿ,ಶಿಕ್ಷಕರು ಕೇವಲ ವಿದ್ಯಾರ್ಥಿಗಳಿಗೆ ಅಕ್ಷರ,ಅಭ್ಯಾಸ,ಅಂಕಿ ಸಂಖ್ಯೆ ಎಲ್ಲವೂ ಬೋಧನೆ ಮಾಡಿದರೆ ಸಾಲದು ಅವರಿಗೆ ಸಮಯ ಮತ್ತು ಕರ್ತವ್ಯ ಪ್ರಜ್ಞೆ ಬಹಳ ಮುಖ್ಯವಾಗಿದೆ.ಎಲ್ಲ ಸಮಸ್ಯೆಗಳಿಗೂ ಸಮಯ ಮತ್ತು ಕರ್ತವ್ಯ ಪ್ರಜ್ಞೆ ಇರದೇ ಇರುವುದು ಮೂಲ ಕಾರಣ ಎಂದು ಹೇಳಿದರು.ಇದೇ ಸಂದರ್ಭದಲ್ಲಿ ಮುಖ್ಯ ಗುರುಗಳಾಗಿರುವ ಲಕ್ಷ್ಮಣ ಝುಳಕಿ ಮಾತನಾಡಿ,ಮಲ್ಲಿಕಾರ್ಜುನ ಪಾರಗೊಂಡ ಹಾಗೂಧರೆಪ್ಪ ಹಲಸಂಗಿ ಅವರು ಈಗಿನ ಶಿಕ್ಷಕರಿಗೆ ಮಾರ್ಗದರ್ಶಕರು ಹಾಗೂ ಮಾದರಿ ಮುಖ್ಯ ಗುರುಗಳೆಂದು ಬಣ್ಣಿಸಿದರು.ಅವರ ತಾಳ್ಮೆ,ಸಹನೆ,ಎಲ್ಲರೊಂದಿಗೂ ಹೊಂದಾಣಿಕೆ ಗುಣ ನಮ್ಮೆಲ್ಲರಿಗೂ ಆದರ್ಶಪ್ರಾಯವಾದ ಗುಣಗಳೆಂದು ಬಣ್ಣಿಸಿದರು. ಇದೇ ಸಂದರ್ಭದಲ್ಲಿ ಈ.ಸಿ .ಓ ಹುದ್ದೆಗೆ ಆಯ್ಕೆಯಾಗಿರುವ ಮುಖ್ಯಗುರು ಲಕ್ಷ್ಮಣ ಝುಳಕಿ,ಬಿ ಆರ್ ಪಿ ಹುದ್ದೆಗೆ ಆಯ್ಕೆಯಾಗಿರುವ ವಿಠ್ಠಲ್ ಹಡಪದ,ಶಿಕ್ಷಕರಾದ ಮಹೇಶ್ ಅಂಜುಟಗಿ,ಮಾರುತಿ ಸುತಾರ ಅವರಿಗೂ ಶ್ರೀ ಮಲ್ಲಿಕಾರ್ಜುನ. ಪಾರಗೊಂಡ ದಂಪತಿಗಳು ಸನ್ಮಾನಿಸಿದರು. ಈ ಸಂದರ್ಭದಲ್ಲಿ ರಾಮಲಿಂಗಯ್ಯ ಮಠ,ಬಸವರಾಜ ಕುಂಬಾರ, ಚಂದ್ರಶೇಖರ ಪಾರಗೊಂಡ,ಮಹಾದೇವ ಪಾರಗೊಂಡ,ಸುನಂದಾ, ಐಶ್ವರ್ಯ,ಸ್ನೇಹಾ,ನವೀನ ಉಪಸ್ಥಿತರಿದ್ದರು.

# ರಾಜಕಾರಣದಿಂದ ನಿವೃತ್ತಿ ಇಲ್ಲ



**ಬೆಂಗಳೂರು. ಆ. 28–** ಮುಂದೆ ತುಮಕೂರು ಲೋಕಸಭಾ ಕ್ಷೇತ್ರದಿಂದ ಚುನಾವಣೆಗೆ ನಿಲ್ಲಲ್ಲ ಎಂದು ಹೇಳಿದ್ದೇನೆಯೇ ಹೊರತು, ರಾಜಕಾರಣದಿಂದ ನಿವೃತ್ತನಾಗುತ್ತೇನೆಂದು ಹೇಳಿಲ್ಲ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಸ್ಪಷ್ಟನೆ ನೀಡಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ರಾಜಕಾರಣದಿಂದ ನಿವೃತ್ತನಾಗುತ್ತೇನೆ ಎಂದೆಲ್ಲಾ ಸುದ್ದಿಗಳು ಹರಿದಾಡುತ್ತಿವೆ. ಇದು ಸರಿಯಲ್ಲ. ತುಮಕೂರು ಲೋಕಸಭಾ ಕ್ಷೇತ್ರದಿಂದ ಮುಂದೆ ಚುನಾವಣೆಗೆ ನಿಲ್ಲಲ್ಲ ಎಂದಷ್ಟೇ ನಾನು ಹೇಳಿರುವುದು ಎಂದರು.

ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ನೀವು ಆಕಾಂಕ್ಷಿಯಾಗಿದ್ದೀರಾ ಎಂಬ ಪ್ರಶ್ನೆಗೆ ರಾಜ್ಯಾಧ್ಯಕ್ಷ ಸ್ಥಾನ ಸದ್ಯಕ್ಕೆ ಖಾಲಿ ಇಲ್ಲ. ನನ್ನನ್ನು ಪ್ರಧಾನಿ ಮೋದಿಯವರು ಕೇಂದ್ರದಲ್ಲಿ ಮಂತ್ರಿ ಮಾಡಿ ಅಭಿವೃದ್ಧಿ ಕೆಲಸಗಳನ್ನು ಮಾಡುವಂತೆ ಬೆನ್ನುತಟ್ಟಿದ್ದಾರೆ. ಅದರಂತೆ ನಾನು ಕರ್ನಾಟಕದ ರೈಲ್ವೆ ಮತ್ತು ಜಲಶಕ್ತಿ ಕ್ಷೇತ್ರದಲ್ಲಿ ಕೇಂದ್ರದ ಯೋಜನೆಗಳನ್ನು ಜಾರಿ ಮಾಡಲು ಮುತುವರ್ಜಿ ವಹಿಸಿ ಕೆಲಸ ಮಾಡುತ್ತಿದ್ದೇನೆ. ಸಾವಿರಾರು ಕೋಟಿ ಯೋಜನೆಗಳನ್ನು ರಾಜ್ಯಕ್ಕೆ ತಂದು ಅದರ ಜಾರಿಗೆ ಶ್ರಮ ವಹಿಸಿದ್ದೇನೆ ಎಂದರು.

ತುಮಕೂರು ಲೋಕಸಭಾ ಕ್ಷೇತ್ರದಲ್ಲೂ ಈ ಹಿಂದೆ 50 ವರ್ಷದಲ್ಲಿ ಆಗದಷ್ಟು ಕೆಲಸವನ್ನು ಮಾಡಬೇಕು ಎಂಬ ಸಂಕಲ್ಪದೊಂದಿಗೆ ಹಲವು ರೈಲ್ವೆ ಯೋಜನೆಗಳನ್ನು ತಂದಿದ್ದೇನೆ. ಬೆಂಗಳೂರಿನ ಸುತ್ತಲಿನ ರೈಲ್ವೆ ಮೇಲ್ಸೇತುವೆಗಳ ನಿರ್ಮಾಣಕ್ಕೂ ಗಮನ ಹರಿಸಿದ್ದೇನೆ ಎಂದು ಅವರು ಹೇಳಿದರು.

ಧರ್ಮಸ್ಥಳ ವಿಚಾರದಲ್ಲಿ ಷಡ್ಯಂತ್ರ ಮಾಡಿ ಅವರೇ ಗುಂಡಿಗೆ ಬಿದ್ದಿದ್ದಾರೆ. ಹೀಗಿದ್ದರೂ ನಮ್ಮ ವಿರುದ್ಧ ರಾಜಕೀಯ ಎಂಬ ಟೀಕೆ ಮಾಡುತ್ತಿದ್ದಾರೆ. ಧರ್ಮಸ್ಥಳದಲ್ಲಿ ವಿಚಾರದಲ್ಲಿ ರಾಜಕೀಯ ಮಾಡುವ ಅಗತ್ಯತೆ ನಮಗೆ ಇಲ್ಲ. ಅಪಪ್ರಚಾರಗಳನ್ನು ಖಂಡಿಸುವುದು ಬಿಜೆಪಿ ಕೆಲಸ. ಅದನ್ನು ಮಾಡುತ್ತಿದ್ದೇವೆ ಎಂದು ಅವರು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಯಾರೋ ಮಾತು ಕೇಳಿ ಎಸ್‌ಐಟಿ ರಚಿಸಿದರು. ಧರ್ಮಸ್ಥಳ, ಚಾಮುಂಡಿ ಬೆಟ್ಟ ಯಾವುದೇ ಆಗಲೀ ಅಪಚಾರ ಮಾಡುವ ಕೆಲಸ ಬೇಡ. ರಾಜ್ಯದ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡಬೇಡಿ. ಸರ್ಕಾರದ ವರ್ತನೆ ಶೋಭ ತರಲ್ಲ. ಧರ್ಮಸ್ಥಳ ವಿಚಾರದಲ್ಲಿ ನಿಮ್ಮ ನಿರ್ಧಾರ ನನಗೆ ನೋವು ತಂದಿದೆ ಎಂದರು.

ಚಾಮುಂಡಿಬೆಟ್ಟ ಹಿಂದೂಗಳ ಆಸ್ತಿಯಲ್ಲ ಎಂಬ ಡಿ.ಕೆ.ಶಿವಕುಮಾರ್ ಹೇಳಿಕ ಸರಿಯಲ್ಲ. ಅವರು ತಮ್ಮ ಹೇಳಿಕೆಯನ್ನು ವಾಪಸ್ ಪಡೆಯಬೇಕು. ಡಿ.ಕೆ. ಶಿವಕುಮಾರ್ ರವರ ಬಾಯಲ್ಲಿ ಈ ರೀತಿಯ ಮಾತು ಬರಬಾರದಿತ್ತು. ತಾಯಿ ಚಾಮುಂಡಿಯ ಬಗ್ಗೆ ಇಡೀ ವಿಶ್ವಕ್ಕೆ ಗೊತ್ತಿದೆ. ಹಿಂದೂಗಳ ಭಾವನೆಗೆ ಧಕ್ಕೆ ತರಬೇಡಿ. ಡಿ.ಕೆ. ಶಿವಕುಮಾರ್ ರವರು ಇನ್ನೊಬ್ಬ ಸಿದ್ದರಾಮಯ್ಯ ಆಗುವುದ ಬೇಡ. ಸಮಾಜಮುಖಿಯಾಗಿ ಕೆಲಸ ಮಾಡಿ, ಓಲೈಕೆ ರಾಜಕಾರಣ ಮಾಡಬೇಡಿ ಎಂದು ಅವರು ಹೇಳಿದರು.

ನವೆಂಬರ್‌ನಲ್ಲಿ ಕ್ರಾಂತಿಯಾಗುವ ಬಗ್ಗೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮಾತನಾಡಿದ್ದಾರೆ. ಕ್ರಾಂತಿಯೂ ಆಗುತ್ತದೆ, ಕಾಂಗ್ರೆಸ್ ಪಕ್ಷದಲ್ಲಿ ಇರುವ ಕೆಲವರಿಗೆ ವಾಂತಿಯೂ ಆಗುತ್ತದೆ ಎಂದು ಅವರು ವ್ಯಂಗ್ಯವಾಡಿದರು

## ನಾನು ಸತ್ಯ ಹೇಳಿದರೆ ಕೆಲವರು ಸಹಿಸುವುದಿಲ್ಲ : ಡಿಕೆಶಿ



**ಬೆಂಗಳೂರು, ಆ.28–** ನಾನು ಸತ್ಯ ಹೇಳಿದರೆ ಕೆಲವರು ಸಹಿಸುವುದಿಲ್ಲ. ಹೀಗಾಗಿ ಪಕ್ಷದ ವಕ್ತಾರರಿಂದ ಹೇಳಿಕೆ ಕೊಡಿಸುವುದಾಗಿ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಮೈಸೂರು ದಸರಾ ಕುರಿತು ತಾವು ನೀಡಿದ ಹೇಳಿಕೆ ವಿವಾದಕ್ಕೆ ಕಾರಣವಾದ ಬೆನ್ನಲ್ಲೆ ಪ್ರತಿಕ್ರಿಯಿಸಿದ ಅವರು, ನಾನು ಕೆಲವು ಸತ್ಯಗಳನ್ನು ಹೇಳಿದರೆ ಕೆಲವರು ಸಹಿಸುವುದಿಲ್ಲ. ಪ್ರಮೋದ ದೇವಿಯವರಾಗಲೀ, ಯದುವೀರ್ ಆಗಲೀ, ವಿಧಾನಸಭೆಯಲ್ಲಾಗಲೀ ನಾನು ಆಡುವ ಮಾತುಗಳಲ್ಲಿ ತಪ್ಪ ಕಂಡುಹಿಡಿಯುವುದೇ ದೊಡ್ಡ ಕೆಲಸವಾಗಿದೆ.ನನ್ನ ವಿಚಾರವಾಗಿ ಏನೋ ನಡೆಯುತ್ತಿದೆ. ಅದಕ್ಕಾಗಿ ನಾನು ಮಾತನಾಡದೇ ಇರುವುದೇ ಉತ್ತಮ. ಪಕ್ಷದ ಬೇರೆ ನಾಯಕರು ಹಾಗೂ ವಕ್ತಾರರಿದ್ದಾರೆ. ಅವರಿಂದ ಮಾತನಾಡಿಸುವುದೇ ಸೂಕ್ತ ಎಂದರು.

ಡಿ.ಕೆ.ಶಿವಕುಮಾರ್ ಅವರ ಇತ್ತೀ?ಚಿನ ಹೇಳಿಕೆಗಳು ತೀವ್ರ ಸಂಚಲನ ಸೃಷ್ಟಿಸಿದ್ದು, ಭಾರೀ ವಿವಾದ ಮೂಡಿಸಿವೆ. ಧರ್ಮಸ್ಥಳದ ಕುರಿತಂತೆ ಎಸ್‌ಐಟಿ ತನಿಖೆ ಪ್ರಗತಿಯಲ್ಲಿರುವಾಗಲೇ ಡಿ.ಕೆ. ಶಿವಕುಮಾರ್ ಷಡ್ಯಂತ್ರ ನಡೆದಿದೆ ಎಂದು ಹೇಳಿ ತನಿಖೆಯ ದಿಕ್ಕನ್ನು ಬದಲಾಯಿಸಿದರು. ಚಾಮುಂಡೇಶ್ವರಿ ದೇವಸ್ಥಾನ ಕೇವಲ ಹಿಂದೂಗಳ ಆಸ್ತಿಯಲ್ಲ ಎಂದು ಹೇಳುವ ಮೂಲಕ ಮತ್ತಷ್ಟು ವಿವಾದಗಳನ್ನು ಮೈಮೇಲೆ ಎಳೆದುಕೊಂಡಿದ್ದಾರೆ. ಇದು ಬಿಜೆಪಿಯವರ ಕೆಂಗಣ್ಣಿಗೂ ಗುರಿಯಾಗಿದ್ದು ತೀಕ್ಷ್ಣ ಪ್ರತಿಕ್ರಿಯೆಗಳು ಕಂಡು ಬರುತ್ತಿವೆ.

ಈ ಸಂಬಂಧಪಟ್ಟಂತೆ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಈ ವಿಚಾರವಾಗಿ ಮಾತನಾಡದೆ ಇರುವುದೇ ಕ್ಷೇ?ಮ ಎಂದು ಪ್ರತಿಕ್ರಿಯಿಸಿದ್ದಾರೆ.ದಸರಾ ಸಮೀಪಿಸುತ್ತಿರುವ ಸಂದರ್ಭದಲ್ಲಿ ಅನಗತ್ಯ ವಿವಾದಗಳನ್ನು ಮೈಮೇಲೆ ಎಳೆದುಕೊಳ್ಳುವುದು ಬೇಡ ಎಂಬ ನಿರ್ಧಾರಕ್ಕೆ ಡಿ.ಕೆ.ಶಿವಕುಮಾರ್ ಬಂದಂತ್ತಿದೆ.

## ಎನ್‌ಕೌಂಟರ್, ಇಬ್ಬರು ಭಯೋತ್ಪಾದಕರು ಸಾವು

**ಶ್ರೀನಗರ, ಆ. 28–** ಜಮ್ಮು ಮತ್ತು ಕಾಶ್ಮೀರದ ಬಂಡಿಪೋರಾ ಜಿಲ್ಲೆಯ ಗುರೆಜ್ ಸೆಕ್ಟರ್‌ನಲ್ಲಿ ಗುರುವಾರ ಭಾರತೀಯ ಸೇನೆ ಮತ್ತು ಸ್ಥಳೀಯ ಪೊಲೀಸರು ಭಯೋತ್ಪಾದಕರೊಂದಿಗೆ ಗುಂಡಿನ ಚಕಮಕಿ ನಡೆಸಿದ್ದಾರೆ.ಜಮ್ಮು ಮತ್ತು ಕಾಶ್ಮೀರದೊಳಗೆ ಭಯೋತ್ಪಾದಕರು ಮತ್ತೊಮ್ಮೆ ನುಸುಳಲು ಪ್ರಯತ್ನಿಸಿದ್ದಾರೆ, ಇದನ್ನು ಸೇನೆ ವಿಫಲಗೊಳಿಸಿದೆ. ಭಾರತೀಯ ಸೇನಾ ಸೈನಿಕರು ಗುರುವಾರ (ಆಗಸ್ಟ್ 28) ಇಬ್ಬರು ಭಯೋತ್ಪಾದಕರನ್ನು ಕೊಂದಿದ್ದಾರೆ. ನೌಶೇರಾದ ಗುರೆಜ್ ಸೆಕ್ಟರ್‌ನಲ್ಲಿ ಸೇನೆಯು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದೆ.

ಆಪರೇಷನ್ ಸಿಂಧೂರ್ ನಂತರ ಇಲ್ಲಿಯವರೆಗೆ ಅನೇಕ ಭಯೋತ್ಪಾದಕರನ್ನು ಕೊಲ್ಲಲಾಗಿದೆ. ಗುರೆಜ್ ಸೆಕ್ಟರ್‌ನಲ್ಲಿ ಸೇನೆ ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದಿದೆ. ನಿಯಂತ್ರಣ ರೇಖೆಯ (ಎಲ್‌ಒಸಿ) ಬಳಿ ಈ ಭಯೋತ್ಪಾದಕರು ಕಾಣಿಸಿಕೊಂಡು, ಅವರು ಒಳನುಸುಳಲು ಪ್ರಯತ್ನಿಸುತ್ತಿದ್ದಾರೆ. ಭಯೋತ್ಪಾದಕರು ಸೈನಿಕರ ಮೇಲೆ ಗುಂಡು ಹಾರಿಸಲು ಪ್ರಾರಂಭಿಸಿದ್ದಾರೆ, ಇದಕ್ಕೆ ಪ್ರತಿಯಾಗಿ ಸೇನೆಯು ಇಬ್ಬರೂ ಭಯೋತ್ಪಾದಕರನ್ನು ಕೊಂದಿದೆ. ಸೇನೆಯು ಬುಧವಾರ (ಆಗಸ್ಟ್ 27) ರಂದು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದೆ. ಭಯೋತ್ಪಾದಕರ ಒಳನುಸುಳುವಿಕೆಯ ಬಗ್ಗೆ ಗುಪ್ತಚರ ಮಾಹಿತಿ ಬಂದಿದೆ ಎಂದು ಭಾರತೀಯ ಸೇನೆ ಗುರುವಾರ ತಿಳಿಸಿದೆ.

ಕಾರ್ಯಾಚರಣೆಯ ಬಗ್ಗೆ , ಭಾರತೀಯ ಸೇನೆಯ ಚಿನಾರ್ ಕಾರ್ಪ್ಸ್ ಎಕ್ಸ್ ಪೋಸ್ಟ್ ಮೂಲಕ ಮಾಹಿತಿ ನೀಡಿದೆ.

ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕರು ಈ ತಿಂಗಳು ಹಲವಾರು ಬಾರಿ ಭಾರತಕ್ಕೆ ನುಸುಳಲು ಪ್ರಯತ್ನಿಸಿದ್ದಾರೆ, ಆದರೆ ಸೇನೆಯು ಅವರ ಪಿತೂರಿಯನ್ನು ವಿಫಲಗೊಳಿಸಿದೆ. ಆಪರೇಷನ್ ಸಿಂಧೂರ್ ಬಗ್ಗೆ ಹೇಳುವುದಾದರೆ, ಸೇನೆಯು ನೂರಕ್ಕೂ ಹೆಚ್ಚು ಭಯೋತ್ಪಾದಕರನ್ನು ಕೊಂದಿದೆ. ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಒಂಬತ್ತು ಭಯೋತ್ಪಾದಕ ಅಡಗುತಾಣಗಳನ್ನು ಭಾರತ ನಾಶಪಡಿಸಿದೆ..

# ಡಿಕೆಶಿ ಹೇಳಿಕೆ ಹಿಂದೂ ಭಾವನೆಗೆ ಧಕ್ಕೆ ತರುವ ವಿಚಾರ : ಯದುವೀರ್

**ಮೈಸೂರು, ಆ.28–** ಚಾಮುಂಡಿಬೆಟ್ಟ ಹಿಂದೂಗಳ ಆಸ್ತಿಯಲ್ಲ ಎಂಬ ಡಿಸಿಎಂ ಡಿಕೆ ಶಿವಕುಮಾರ್ ಹೇಳಿಕೆ ನಿಜಕ್ಕೂ ಹಾಸ್ಯಾಸ್ಪದ. ಗೌರಿ ಹಬ್ಬ ಆಚರಿಸುವ ವೇಳೆ ಹಿಂದೂ ಭಾವನೆಗೆ ಧಕ್ಕೆ ತರುವ ವಿಚಾರ ಇದು ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಹೇಳಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿರುವ ಅವರು , ಸಾವಿರಾರು ವರ್ಷಗಳ ಹಿಂದೆ ಮರ್ಕಂಡೇಯ ತಪಸ್ಸು ಮಾಡಿದ್ದ ಸ್ಥಳ ಅದು. ಸಾವಿರಾರು ವರ್ಷಗಳಿಂದ ಚಾಮುಂಡಿ ಇರುವುದು ಕೂಡ ಉಲ್ಲೇಖ ಇದೆ . ಚಾಮುಂಡಿಬೆಟ್ಟಕ್ಕೆ ಎಲ್ಲರಿಗೂ ಪ್ರವೇಶವಿದೆ. ಅದು ಧಾರ್ಮಿಕ ಸ್ಥಳವಾಗಿರುವ ಕಾರಣ ಎಲ್ಲರೂ ಹೋಗಬಹುದು. ಆಧುನಿಕ ಕಾಲಘಟ್ಟದಲ್ಲಿ ಜಾತ್ಯಾತೀತ ದೃಷ್ಟಿಕೋನದಿಂದ ನೋಡಬಹುದು. ಲಕ್ಷಾಂತರ ಜನರ ಭಾವನೆಗೆ ಧಕ್ಕೆ ಉಂಟಾಗಿದೆ.ಧರ್ಮ ಉಳಿಸುವ ನಿಟ್ಟಿನಲ್ಲಿ ಹೋರಾಟ ನಡೆಸುತ್ತೆ?ವೆ. ಜತೆಗೆ ಕಾನೂನು ಚೌಕಟ್ಟಿನಲ್ಲೂ ಹೋರಾಡುತ್ತೆ?ವೆ. ನಾವು ಎಲ್ಲ ಧರ್ಮ ಒಪ್ಪಿಕೊಳ್ತಿ?ವಿ. ಹಾಗಂತ ಒಂದು ಧರ್ಮದ ಓಲೈಕೆಗೆ ಮುಂದಾಗಬಾರದು. ರಾಜ್ಯದಲ್ಲಿಲವು ಸಮಸ್ಯೆಗಳಿವೆ. ಅವುಗಳನ್ನ ಮುಚ್ಚಿ ಹಾಕಲು ಇಂತಹ ಹೇಳಿಕೆ ಬೇಡ ಎಂದು ಅವರು ಹೇಳಿದ್ದಾರೆ.

ಚಾಮುಂಡಿಬೆಟ್ಟ ಟಾರ್ಗೆಟ್ ಆಗಿದೆಯೇ ಎಂಬ ಪ್ರಶ್ನೆಗೆ, ಚಾಮುಂಡಿಬೆಟ್ಟ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡುವುದು ಇದೇ ಕಾಂಗ್ರೆಸ್ ಸರ್ಕಾರ. ಬೆಟ್ಟವನ್ನ ನಿಯಂತ್ರಣಕ್ಕೆ ತೆಗೆದುಕೊಳ್ಳುವುದು ಅವರ ಹುನ್ನಾರ. ಬರೀ ಹಿಂದೂ ದೇವಾಲಯಗಳನ್ನ ತೆಗೆದುಕೊಳ್ತಿದ್ದಾರೆ.ಬೆಂಗಳೂರಿನ ಆಂಜನೇ ಯ ದೇವಸ್ಥಾನವನ್ನೂ ಹಾಗೆ ಮಾಡಿದ್ರು. ಯಾವಾಗಲೂ ಹಿಂದುಗಳಿಗೆ ವಿರುದ್ಧ ಹೇಳಿಕೆ ನೀಡುತ್ತಿದ್ದಾರೆ. ಕೋಟ್ಯಾಂತರ ಜನರ ಭಾವನೆಗೆ ಧಕ್ಕೆ ತರುತ್ತಿದ್ದಾರೆ. ಕಾಂಗ್ರೆಸ್ ಹಿಂದೂ ಸ್ಥಳಗಳನ್ನ ಟಾರ್ಗೆಟ್ ಮಾಡ್ತಿದೆ. ಕಾಂಗ್ರೆಸ್‌ನಿಂದ ಧಾರ್ಮಿಕ್ ಭಾವನೆಗೆ ಧಕ್ಕೆ ಉಂಟಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ದೇವಾಲಯಗಳನ್ನ ನಿಯಂತ್ರಣಕ್ಕೆ ತರುತ್ತಿದ್ದಾರೆ. ಪ್ರಥಮವಾಗಿ ಇದೊಂದು ಧಾರ್ಮಿಕ ಸ್ಥಳ. ಬೆಟ್ಟ ಹಿಂದುಗಳ ಆಸ್ತಿ. ಅದು ಎಂದೆಂದಿಗೂ ಹಿಂದುಗಳ ಆಸ್ತಿ ಆಗಿರುತ್ತೆ. ಉಪಮುಖ್ಯಮಂತ್ರಿ ಹೇಳಿಕೆಯಿಂದ ಏನೂ ಆಗಲ್ಲ ಎಂದರು.ಮೈಸೂರು–ಕೊಡಗು ಸಂಸದ ಯದುವೀರ್ ಅವರು ಪತ್ರಿಕಾಗೋಷ್ಠಿ ನಡೆಸಿದ ಬೆನ್ನಲ್ಲೇ ಮಾಧ್ಯಮಗಳ ಜತೆ ಮಾತನಾಡಿದ ಮಾಜಿ ಸಂಸದ ಪ್ರತಾಪ್ ಸಿಂಹ, ಶಿವನ ಕಪಾಲಿ ಬೆಟ್ಟವನ್ನೆ ಏಸು ಬೆಟ್ಟ ಮಾಡಲು ಹೊರಟ ಡಿಕೆ ಶಿವಕುಮಾರ್ ರಿಂದ ನಮಗೆ ಧರ್ಮ ದ ಪಾಠ ಬೇಡ. ಅನ್ಯ ಧರ್ಮದವರನ್ನು ಬರೀ ಓಲೈಕೆಗಾಗಿ ಬ್ರದರ್ಸ್ ಎಂದು ಕರೆಯುವ ಡಿಕೆ ಶಿವಕುಮಾರ್ ನಮಗೆ ಧರ್ಮದ ಬಗ್ಗೆ ತಿಳುವಳಿಕೆ ಹೇಳುವುದು ಬೇಡ ಎಂದಿದ್ದಾರೆ.

# ಕಾಮನ್‌ವೆಲ್ತ್ ಹರಾಜಿನಲ್ಲಿ ಪಾಲ್ಗೊಳ್ಳಲು ಗ್ರೀನ್ ಸಿಗ್ನಲ್

**ನವದೆಹಲಿ, ಆ.28–** ಮುಂಬರುವ 2030ರಲ್ಲಿ ದೇಶದಲ್ಲಿ ಕಾಮನ್‌ವೆಲ್ತ್ ಕ್ರಿಡಾಕೂಟವನ್ನು ಆಯೋಜಿಸುವ ಭಾರತದ ಹರಾಜು ಪ್ರಕ್ರಿಯೆಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಹರಾಜು ಪ್ರಕ್ರಿಯೆ ಅಂಗೀಕಾರವಾದರೆ ಗುಜರಾತ್ ಸರ್ಕಾರಕ್ಕೆ ಅಗತ್ಯವಾದ ಅನುದಾನವನ್ನು ಮಂಜೂರು ಮಾಡಲು ಸಹ ಅನುಮೋದನೆ ನೀಡಿದೆ. ಪ್ರತಿಷ್ಠಿತ ಕಾಮನ್‌ವೆಲ್ತ್ ಕ್ರಿಡಾಕೂಟವನ್ನು ಆಯೋಜಿಸಲು ಅಹಮದಾಬಾದ್‌ನಗರ ಯೋಗ್ಯವೆಂದು ಗುರುತಿಸಲಾಗಿದೆ.ವಿಶ್ವ ದರ್ಜೆಯ ಕ್ರಿಡಾಂಗಣಗಳು, ಅತ್ಯಾಧುನಿಕ ತರಬೇತಿ ಸೌಲಭ್ಯಗಳು ಮತ್ತು ಉತ್ಸಾಹಭರಿತ ಕ್ರಿಡಾ ಸಂಸ್ಕೃತಿಯಿಂದಾಗಿ ಅಹಮದಾಬಾದ್ ಅನ್ನು ಆತಿಥೇಯ ನಗರವಾಗಿ ಪ್ರಸ್ತಾಪಿಸಿದೆ.ಭಾರತವು ಕಾಮನ್‌ವೆಲ್ತ್ ಕ್ರಿಡಾಕೂಟವನ್ನು ಆಯೋಜಿಸುವ ಬಗ್ಗೆ ಇದೇ ಮಾರ್ಚ್‌ನಲ್ಲಿ ಆಸಕ್ತಿ ವ್ಯಕ್ತಪಡಿಸಿತ್ತು. ಈ ಪ್ರಸ್ತಾವನೆಗೆ ಭಾರತೀಯ ಒಲಿಂಪಿಕ್ ಅಸೋಸಿಯೇಷನ್ ಅನುಮೋದನೆ ನೀಡಿತ್ತು.ಇದೀಗ ಕೇಂದ್ರ ಸಚಿವ ಸಂಪುಟವು ಸಹ ಸಮ್ಮತಿಯನ್ನು ಸೂಚಿಸಿದೆ. ಬಿಡ್ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನಾಂಕವಾಗಿದ್ದು, ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸಚಿವ ಸಂಪುಟ ಅನುಮೋದಿಸಿದೆ.

ಯುವ ಮಾರ್ಗ

ಶುಕ್ರವಾರ : 29–08–2025

## ವಿನಯಕ್ಕೆ ಪರಮಾತ್ಮನ ಒಲುಮೆ



**ಬೀದರ್: ಅ.28–**ವಿನಯಕ್ಕೆ ಪರಮಾತ್ಮ ಒಲಿಯುತ್ತಾನೆ ಎಂದು ಡಾ. ದೇವಕಿ ನಾಗೂರೆ ಹೇಳಿದರು.

ನಗರದ ಹುಡ್ಕೋ ಕಾಲೊನಿಯಲ್ಲಿ ನಡೆದ ಶ್ರಾವಣ ಪ್ರವಚನ ಸಮಾರೋಪ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ವಿನಯವನ್ನು ದೇವರು ಇಷ್ಟಪಡುತ್ತಾನೆ. ಅಂತೆಯೇ ಶರಣರು ಸದುವಿನಯವೇ ಸದಾಶಿವನ ಒಲುಮೆ ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ಬಸವಾದಿ ಶರಣರ ಹೃದಯದಲ್ಲಿ ಪ್ರೀತಿ, ಮನದಲ್ಲಿ ದಯೆ ಹಾಗೂ ನುಡಿಯಲ್ಲಿ ವಿನಯ ತುಂಬಿರುತ್ತಿತ್ತು. ಅವರು ದೇವರು ಮೆಚ್ಚುವ ರೀತಿಯಲ್ಲಿ ಬದುಕಿದ್ದರು. ಶರಣರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಶರಣಯ್ಯ ಸ್ವಾಮಿ ಸಾನಿಧ್ಯ ವಹಿಸಿದ್ದರು. ನಗರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷ ಪ್ರಶಾಂತ ದೊಡ್ಡಿ, ಅಕ್ಕಮಹಾದೇವಿ ಸಾಂಸ್ಕೃತಿಕ ಸಂಘದ ಅಧ್ಯಕ್ಷೆ ಸೂಗಮ್ಮ ಜಿರೋಬೆ, ಸಾಹಿತಿ ಪುಣ್ಯವತಿ ವಿಸಾಜಿ, ಅನುಭವ ಮಂಟಪದ ಸಾಂಸ್ಕೃತಿಕ ವಿದ್ಯಾಲಯದ ಸಂಚಾಲಕಿ ಸುವರ್ಣಾ ಚಿಮಕೋಡೆ, ಜೇರಪ್ಪ ಮಮದಾಪುರೆ, ಸುನೀತಾ ಕೂಡ್ಲಿಕರ್ ಇದ್ದರು.

ಕಸ್ತೂರಿ ಸ್ವಾಮಿ ವಚನ ಗಾಯನ ಮಾಡಿದರು. ರಾಜಶ್ರೀ ಶೀಲವಂತ ನಿರೂಪಿಸಿದರು. ಸುನೀತಾ ಜಿರೋಬೆ ಸ್ವಾಗತಿಸಿದರು. ಹೇಮಲತಾ ವೀರಶೆಟ್ಟಿ ವಂದಿಸಿದರು.

## ಹೆಚ್1ಬಿ ವೀಸಾ ವ್ಯವಸ್ಥೆ ಬದಲಾವಣೆಗೆ ಮುಂದಾದ ಟ್ರಂಪ್

**ನ್ಯೂಯಾರ್ಕ್, ಆ. 28–** ಭಾರತೀಯ ಐಟಿ ವೃತ್ತಿಪರರಲ್ಲಿ ಅತ್ಯಂತ ಬೇಡಿಕೆಯಿರುವ ವಲಸೆಯೇತರ ವೀಸಾ ಹೆಚ್1ಬಿ ಕಾರ್ಯಕ್ರಮವನ್ನು ಬದಲಾಯಿಸಲು ಟ್ರಂಪ್ ಆಡಳಿತ ಯೋಜಿಸುತ್ತಿದೆ ಮತ್ತು ಗ್ರಿನ್ ಕಾರ್ಡ್ ಪ್ರಕ್ರಿಯೆಯಲ್ಲಿ ಬದಲಾವಣೆಗಳನ್ನು ತರಲು ಯೋಜಿಸುತ್ತಿದೆ ಎಂದು ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್ ಹೇಳಿದ್ದಾರೆ.

ನಾನು ಹೆಚ್1ಬಿ ಕಾರ್ಯಕ್ರಮವನ್ನು ಬದಲಾಯಿಸುವಲ್ಲಿ ಭಾಗಿಯಾಗಿದ್ದೇನೆ. ನಾವು ಆ ಕಾರ್ಯಕ್ರಮವನ್ನು ಬದಲಾಯಿಸಲಿದ್ದೇವೆ, ಏಕೆಂದರೆ ಅದು ಭಯಾನಕವಾಗಿದೆ ಎಂದು ಲುಟ್ನಿಕ್‌ಫಾಕ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಹೇಳಿದರು.ಅಮೆರಿಕದಲ್ಲಿ ಶಾಶ್ವತ ನಿವಾಸವನ್ನು ಒದಗಿಸುವ ಗ್ರಿನ್ ಕಾರ್ಡ್ ಪ್ರಕ್ರಿಯೆಯನ್ನು ಸಹ ಟ್ರಂಪ್ ಆಡಳಿತ ಬದಲಾಯಿಸಲಿದೆ ಎಂದು ಅವರು ಹೇಳಿದರು.ನಿಮಗೆ ಗೊತ್ತಾ, ನಾವು ಗ್ರಿನ್ ಕಾರ್ಡ್‌ಗಳನ್ನು ನೀಡುತ್ತೇವೆ. ಸರಾಸರಿ ಅಮೆರಿಕನ್ನರು ವರ್ಷಕ್ಕೆ 75,000 ಗಳಿಸುತ್ತಾರೆ ಮತ್ತು ಸರಾಸರಿ ಗ್ರಿ?ನ್ ಕಾರ್ಡ್ ಸ್ವಿಕರಿಸುವವರು 66,000 ಗಳಿಸುತ್ತಾರೆ, ಆದ್ದರಿಂದ ನಾವು ಕೆಳಮಟ್ಟದ ಕ್ವಾರ್ಟೈಲ್ ಅನ್ನು ತೆಗೆದುಕೊಳ್ಳುತ್ತಿದ್ದೇವೆ, ಉದಾಹರಣೆಗೆ, ನಾವು ಅದನ್ನು ಏಕೆ ಮಾಡುತ್ತಿದ್ದೇವೆ ಅದಕ್ಕಾಗಿಯೇ ಡೊನಾಲ್ಡ್ ಟ್ರಂಪ್ ಅದನ್ನು ಬದಲಾಯಿಸಲಿದ್ದಾರೆ. ಅದು ಬರುತ್ತಿರುವ ಗೋಲ್ಡ್ ಕಾರ್ಡ್. ಮತ್ತು ನಾವು ಈ ದೇಶಕ್ಕೆ ಬರಲು ಉತ್ತಮ ಜನರನ್ನು ಆಯ್ಕೆ ಮಾಡಲು ಪ್ರಾರಂಭಿಸಲಿದ್ದೇವೆ. ಅದು ಬದಲಾಗುವ ಸಮಯ ಬಂದಿದೆ ಎಂದು ಅವರು ಹೇಳಿದರು.

ಹೆಚ್1ಬಿ ವೀಸಾಗಳ ಪ್ರಮುಖ ಫಲಾನುಭವಿಗಳು ಭಾರತೀಯರು, ಇದು ಪ್ರಪಂಚದಾದ್ಯಂತದ ಅತ್ಯುತ್ತಮ ಪ್ರತಿಭೆ ಮತ್ತು ಮಿದುಳುಗಳನ್ನು ತರುತ್ತದೆ.ಭಾರತದ ಉನ್ನತ ಕೌಶಲ್ಯ ಹೊಂದಿರುವ ವೃತ್ತಿಪರರು ಅಗಾಧ ಸಂಖ್ಯೆಯ ಹೆಚ್1ಬಿ ವೀಸಾಗಳೊಂದಿಗೆ ಹೊರಡುತ್ತಾರೆ. ಪ್ರಸ್ತುತ ವೀಸಾ ವ್ಯವಸ್ಥೆಯು ವಿದೇಶಿ ಕಾರ್ಮಿಕರಿಗೆ ಅಮೆರಿಕದ ಉದ್ಯೋಗಾವಕಾಶಗಳನ್ನು ತುಂಬಲು ಅನುವು ಮಾಡಿಕೊಡುವ ಒಂದು ಹಗರಣವಾಗಿದೆ. ಅಮೇರಿಕನ್ ಕಾರ್ಮಿಕರನ್ನು ನೇಮಿಸಿಕೊಳ್ಳುವುದು ಎಲ್ಲಾ ದೊಡ್ಡ ಅಮೇರಿಕನ್ ವ್ಯವಹಾರಗಳ ಆದ್ಯತೆಯಾಗಿರಬೇಕು. ಈಗ ಅಮೆರಿಕನ್ನರನ್ನು ನೇಮಿಸಿಕೊಳ್ಳುವ ಸಮಯ ಬಂದಿದೆ ಎಂದು ಹೇಳಿದರು.

## ಅಕ್ರಮ ಸಿಲಿಂಡರ್ ಅಡ್ಡೆ ಮೇಲೆ ದಾಳಿ


**ವಿಜಯಪುರ, ಆ.28–**ನಗರದ ಅತಾವುಲ್ಲಾ ಚೌಕ್ ಹತ್ತಿರ ಗೃಹ ಬಳಕೆಯ ಅಡುಗೆ ಅನಿಲ ಸಿಲಿಂಡರ್ ಗಳಿಂದ ಆಟೋಗಳಿಗೆ ರೀಪಿಲ್ ಮಾಡುತ್ತಿರುವ ಸ್ಥಳದ ಮೇಲೆ ಆಹಾರ ಇಲಾಖೆಯ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ಬುಧವಾರ ದಾಳಿ ಮಾಡಿ ಅಕ್ರಮ ಸಿಲಿಂಡರ್ ಗಳನ್ನು ವಶಪಡಿಸಿಕೊಂಡರು.

1 ತುಂಬಿದ ಅಡುಗೆ ಅನಿಲ ಸಿಲಿಂಡರ್ ಹಾಗೂ 3 ಖಾಲಿ ಸಿಲಿಂಡರ್ ಗಳನ್ನು, ಮತ್ತು ರಿಪಿಲ್ ಮಾಡಲು ಬಳಸುತ್ತಿದ್ದ ಮೋಟಾರು ಮತ್ತು ತೂಕದ ಯಂತ್ರವನ್ನು ವಶಪಡಿಸಿಕೊಂಡು ಗೋಲ್ ಗುಂಬಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದೆ ಎಂದು

ಆಹಾರ ಇಲಾಖೆಯ ಉಪ ನಿರ್ದೇಶಕ ವಿನಯಕುಮಾರ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯದ ಜಲಮೂಲಗಳ ಸಮಗ್ರ ನಿರ್ವಹಣೆಗೆ ಉಪಗ್ರಹ ಹಾಗೂ ಎಐ ತಂತ್ರಜ್ಞಾನದ ಡಿಜಿಟಲ್ ವಾಟರ್ ಸ್ಟಾಕ್ ಅಳವಡಿಕೆ

**ಯುವ ಮಾರ್ಗ ಸುದ್ದಿ**



**ಬೆಂಗಳೂರು,ಆ. 8–** ರಾಜ್ಯದಲ್ಲಿರುವ ಜಲಮೂಲಗಳ ಸಮಗ್ರ ನಿರ್ವಹಣೆ ಹಾಗೂ ನೀರಿನ ನಿರ್ವಹಣೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ತರುವ ನಿಟ್ಟಿನಲ್ಲಿ ಉಪಗ್ರಹ ದತ್ತಾಂಶ ಹಾಗೂ ಎಐ ತಂತ್ರಜ್ಞಾನ ಆಧಾರಿತ ಡಿಜಿಟಲ್ ವಾಟರ್ ಸ್ಟಾಕ್ ಯೋಜನೆ ಅಳವಡಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದ್ದಾರೆ.

ಈ ಬಗ್ಗೆ ಮಾಧ್ಯಮ ಪ್ರಕಣೆಯನ್ನು ನೀಡಿರುವ ಅವರು, ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಅಂತರ್ಜಲದ ಮಟ್ಟ ಕುಸಿತಗೊಂಡಿರುವ ಹಾಗೆಯೇ, ನೀರಿನ ಲಭ್ಯತೆ ಅಸಮರ್ಪಕವಾಗಿರುವ ಸಂಧರ್ಭದಲ್ಲಿ ದೇಶದಲ್ಲೆ ಮೊದಲ ಬಾರಿಗೆ, ಕರ್ನಾಟಕ ಸರ್ಕಾರ 'ಡಿಜಿಟಲ್ ವಾಟರ್ ಸ್ಟಾಕ್' (D W S) ಎಂಬ ನೂತನ ತಂತ್ರಜ್ಞಾನ ಆಧಾರಿತ ನೀರಿನ ನಿರ್ವಹಣಾ ವೇದಿಕೆಯನ್ನು ಅನುಷ್ಠಾನಗೊಳಿಸುತ್ತಿದೆ.

ಕರ್ನಾಟಕ ಟ್ಯಾಂಕ್ ಸಂರಕ್ಷಣಾ ಮತ್ತು ಅಭಿವೃದ್ಧಿ ಪ್ರಾಧಿಕಾರ (KTCDA) ಈ ಯೋಜನೆಯಲ್ಲಿ ಪ್ರಮುಖ ಪಾತ್ರವಹಿಸಲಿದ್ದು, ರಾಜ್ಯದ ಕೆರೆಗಳು ಮತ್ತು ಇನ್ನಿತರ ಜಲಮೂಲಗಳನ್ನು ಡಿಜಿಟಲ್ ವಾಟರ್ ಸ್ಟಾಕ್ (D W S ) ಚಟುವಟಿಕೆ ಅಡಿಯಲ್ಲಿ ಸಮರ್ಪಕವಾಗಿ ಸರ್ವೇ ಸೇರಿದಂತೆ ಮೇಲ್ವಿಚಾರಣೆ ಹಾಗೂ ಅವುಗಳನ್ನು ಸಮರ್ಪಕವಾಗಿ ನಿರ್ವಹಿಸುವುದನ್ನು ಖಚಿತಪಡಿಸಲಿದೆ.

ಉಪಗ್ರಹ ಸೆನ್ಸಾರ್ ಹಾಗೂ ಇಮೇಜಿಂಗ್ ಮತ್ತು ಕೃತಕ ಬುದ್ಧಿಮತ್ತೆ (ಒಐ) ತಂತ್ರಜ್ಞಾನಗಳ ಮೂಲಕ ರಾಜ್ಯದ ಸರೋವರಗಳು, ಕೆರೆಗಳು ಮತ್ತು ಭೂಗರ್ಭದ ಜಲಧಾರೆಗಳ (aquifer) ಗಳ ಸಮಗ್ರ ನಿರ್ವಹಣೆಯ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇದಾಗಿದೆ. ವಿವಿಧ ಇಲಾಖೆಗಳಲ್ಲಿ ಹಂಚಿಹೋಗಿರುವ ಜಲಮೂಲಗಳ ದತ್ತಾಂಶಗಳನ್ನು ಒಗ್ಗೂಡಿಸುವ ಮೂಲಕ ಒಂದೇ ವೇದಿಕೆಯ ಡಿಯಲ್ಲಿ ನಿರ್ವಹಿಸುವುದು ಇದರ ಮುಖ್ಯ ಉದ್ದೇಶವಾಗಿವೆ.

ರಾಜ್ಯದಲ್ಲಿ 41,000ಕ್ಕೂ ಹೆಚ್ಚು ನೀರಿನ ಮೂಲಗಳಿದ್ದು, 34,000ಕ್ಕೂ ಹೆಚ್ಚು ಕೆರೆಗಳನ್ನು ಈಗಾಗಲೇ ಸಮೀಕ್ಷೆ ಮಾಡಲಾಗಿದೆ ಮತ್ತು 31,000ಕ್ಕೂ ಹೆಚ್ಚು ಜಿಯೋಟ್ಯಾಗ್ ಮಾಡಲಾಗಿದೆ. 42,678 ಎಕರೆ ಅಕ್ರಮ ಅತಿಕ್ರಮಣ ಗುರುತಿಸ ಲಾಗಿದ್ದು, 29,000 ಎಕರೆ ಪ್ರದೇಶ ದಲ್ಲಿ ಅತಿಕ್ರಮಣ ತೆರವುಗೊಳಿಸಲಾಗಿದೆ. ಮೊದಲ ಹಂತದಲ್ಲಿ ಅಂತರ್ಜಲದ ನೀರಿನ ಅತಿಯಾದ ಬಳಕೆ ಮಾಡುತ್ತಿರುವ 41 ತಾಲ್ಲೂಕುಗಳಲ್ಲಿ ಡಿಜಿಟಲ್ ವಾಟರ್ ಸ್ಟಾಕ್ ಯೋಜನೆಯನ್ನು ಜಾರಿಗೆ ತರಲಾಗುವುದು. ರಾಜ್ಯದ ಜಲಮೂ ಲಗಳನ್ನು ನೈಸರ್ಗಿಕವಾದ ಉಳಿತಾಯ ಖಾತೆಗಳಂತೆ ಪರಿವರ್ತಿ ಸಲು ಹಾಗೆಯೇ, ಲಭ್ಯವಿರುವಂತಹ ಜಲಮೂಲಗಳ ಸಮರ್ಪಕ ನಿರ್ವಹಣೆ ಮಾಡುವುದಕ್ಕೆ ನಮ್ಮ ಸರಕಾರ ಬದ್ಧವಾಗಿದೆ. ಈ ನಿಟ್ಟಿನಲ್ಲಿ ಈ ಯೋಜನೆ ಬಹಳಷ್ಟು ಸಹಕಾರಿಯಾಗಿರಲಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದ್ದಾರೆ.

**ಏನಿದು ಡಿಜಿಟಲ್ ವಾಟರ್ ಸ್ಟಾಕ್:** ಉಪಗ್ರಹಗಳ ಸೆನ್ಸರ್ ಗಳಿಂದ ಪಡೆದ ದತ್ತಾಂಶಗಳು, ಎಐ ಹಾಗೂ ಮಷಿನ್ ಲರ್ನಿಂಗ್ ನಿಂದ ಇಮೇಜಿಂಗ್‌ನ ವಿಶ್ಲೇಷಣೆ ಮಾಡುವ ತಂತ್ರಜ್ಞಾನ ಇದಾಗಿದೆ. ಇದರಿಂದ ಜಲಮೂಲಗಳ ಐದು ವರ್ಷಗಳ ಹಿಂದಿನ ದತ್ತಾಂಶವನ್ನು ಪಡೆದುಕೊಂಡು, ಪ್ರಸ್ತುತ ಇರುವ ಸ್ಥಿತಿಗತಿಗಳ ಹೋಲಿಕೆ ಮಾಡಬಹುದಾಗಿದೆ. ಅಲ್ಲದೇ, ಯಾವುದೇ ಜಲಮೂಲದ ಸ್ವರೂಪ, ನೀರಿನ ಶೇಖರಣೆಯಲ್ಲಿ ಆಗುತ್ತಿರುವ ವ್ಯತ್ಯಾಸವನ್ನು ಗುರುತಿಸುವ ಮೂಲಕ ಅದನ್ನು ಸರಿಪಡಿಸುವ ಕಾರ್ಯ ಮಾಡಲು ಇದು ಅನುವು ಮಾಡಿಕೊಡಲಿದೆ.

ಮಾಸ್ಟರ್ ವಾಟರ್ ಅಟ್ಲಸ್ ಮತ್ತು ಡ್ಯಾಶ್‌ಬೋರ್ಡ್: ಡಿಜಿಟಲ್ ವಾಟರ್ ಸ್ಟಾಕ್ ಮೂಲಕ ರಾಜ್ಯಮಟ್ಟದ ನೀರಿನ ನಿರ್ವಹಣೆಯ ಡ್ಯಾಶ್‌ಬೋರ್ಡ್ ಮತ್ತು "ಮಾಸ್ಟರ್ ವಾಟರ್ ಅಟ್ಲಸ್" ರಚಿಸಲಾಗುವುದು. ಇದು ಅಂತರ್ಜಲದ ಮಟ್ಟ, ಮಳೆಯ ಪ್ರಮಾಣ, ಮೇಲ್ಮೈ ಹರಿವು, ಬಳಕೆ ಮತ್ತು ನೀರಿನ ಗುಣಮಟ್ಟದ ಡೇಟಾವನ್ನು ಸಂಗ್ರಹಿಸಿ, ನಿಖರ ದತ್ತಾಂಶಗಳ ಮೂಲಕ ನೀರಿನ ಮೂಲಗಳ ಸ್ಥಿತಿಯನ್ನು ನಿರ್ವಹಿಸಲು ಅನುವು ಮಾಡಿಕೊಡಲಿದೆ.

ಈ ಯೋಜನೆಯ ಮೂಲಕ ನಗರೀಕರಣ ಹಾಗೂ ಕೃಷಿ ಒತ್ತಡದಿಂದ ಉಂಟಾಗುವ ನೀರಿನ ಮೂಲಕ ಕುಸಿತ, ಮಾಲಿನ್ಯ ಮತ್ತು ಅತಿಕ್ರಮಣಗಳನ್ನು ಸರಿಯಾದ ಸಮಯದಲ್ಲಿ ಗುರುತಿಸಲು ಹಾಗೂ ತಕ್ಷಣದ ಕ್ರಮ ಕೈಗೊಳ್ಳಲು ಅನುವು ಮಾಡಿಕೊಡುತ್ತದೆ ಎಂದು ಸಚಿವರು ತಮ್ಮ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಸ್ತೆ, ಕೆರೆ ಒತ್ತುವರಿ ತಡೆಗೆ ಕ್ರಮವಹಿಸಿ: ಉಪ ಲೋಕಾಯುಕ್ತರ ಸೂಚನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.28–**ರಾಯಚೂರು ಪ್ರವಾಸದಲ್ಲಿದ್ದ ಉಪ ಲೋಕಾಯುಕ್ತರಾದ ನ್ಯಾ. ಬಿ.ವೀರಪ್ಪ ಅವರು ಊಟದ ವಿರಾಮದ ನಂತರ ನಗರದಲ್ಲಿನ ಹಳೆಯ ಮಹಾನಗರ ಪಾಲಿಕೆಯ ಕಚೇರಿಗೆ ಭೇಟಿ ನೀಡಿದರು.

ಬಹುಮುಖ್ಯವಾದ ಸರ್ಕಾರಿ ಸ್ವತ್ತಿನ ಅತಿಕ್ರಮಣವು ಕೂಡಲೇ ತೆರವಾಗಬೇಕು ಎಂದು ದಾಖಲಾದ, ದಾಖಲಾಗುವ ದೂರಿನ ಪ್ರಕರಣಗಳ ವಿಲೆಗೆ ಪಾಲಿಕೆಯ ಅಧಿಕಾರಿಗಳು ಮೊದಲಾದ್ಯತೆ ನೀಡಬೇಕು ಎಂದು ಭೇಟಿ ವೇಳೆಯಲ್ಲಿ, ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ನಗರದಲ್ಲಿನ ಸಾರ್ವಜನಿಕ ಆಸ್ತಿಗಳಾದ ಕೆರೆ, ಬಾವಿ ಜಾಗ, ರಸ್ತೆ ಪ್ರದೇಶವನ್ನು ಯಾರು ಸಹ ಒತ್ತುವರಿ ಮಾಡದಂತೆ ನೋಡಿಕೊ



ಳ್ಳಬೇಕು. ಇದು ಪಾಲಿಕೆಯ ಬಹುಮುಖ್ಯ ಕಾರ್ಯ. ಕರ ವಸೂಲಿಯನ್ನು ಸಹ ನಿಯಮಿತವಾಗಿ ನಡೆಸಿ ಅದರಿಂದ ಬರುವ ಆದಾಯದಿಂದ ನಗರದ ನಿವಾಸಿಗಳಿಗೆ ಕುಡಿಯುವ ನೀರು, ಬೀದಿ ದೀಪ ಸೇರಿದಂತೆ ಸರಿಯಾದ ಮೂಲಭೂತ ಸೌಕರ್ಯ ಕಲ್ಪಿಸಲು ಒತ್ತು ನೀಡಬೇಕು ಎಂದು ಪಾಲಿಕೆಯ ಅಧಿಕಾರಿ ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

## ಜಿಎಸ್‌ಟಿ ಕಡಿತ ನಿರ್ಧಾರ ಬೊಮ್ಮಾಯಿ ಅಭಿನಂದನೆ

**ಬೆಂಗಳೂರು, ಆ. 28–** ಜಿಎಸ್‌ಟಿ ಕಡಿತ ಮತ್ತು ಸರಳೀಕರಣ ಮಾಡಲು ತೀರ್ಮಾನಿಸಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿನಂದನೆ ಸಲ್ಲಿಸಿದ್ದಾರೆ.

ಈ ಕುರಿತು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆದಿರುವ ಅವರು, ಜಿಎಸ್ ಟಿ ಸರಳೀಕರಣದಿಂದ ದೇಶದ ಜಿಡಿಪಿ ಎರಡಂಕಿಗೆ ಹೆಚ್ಚಳವಾಗಲಿದ್ದು, ಭಾರತ ವಿಶ್ವದ ನಾಲ್ಕನೇ ಆರ್ಥಿಕ ಶಕ್ತಿಯಿಂದ ಮೂರನೇ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮುವ ವಿಶ್ವಾಸ ಇದೆ ಎಂದು ತಿಳಿಸಿದ್ದಾರೆ. ನಿಮ್ಮ ನಾಯಕತ್ವದಲ್ಲಿ ನಮ್ಮ ದೇಶದ ಆರ್ಥಿಕತೆ ಬಲಗೊಳಿಸಲು ಬಲಿಷ್ಠ ಮತ್ತು ಪರಿಣಾಮಕಾರಿ ಸುಧಾರಣೆಗಳನ್ನು ತರುತ್ತಿರುವುದಕ್ಕೆ ನಿಮಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನಾಯಕತ್ವ ಹಾಗೂ ನಿಮ್ಮ ಬದ್ದತೆಯಿಂದಾಗ ದೇಶದ ತೆರಿಗೆ ಕಾಯ್ದೆಗಳ ವ್ಯವಸ್ಥೆಯಲ್ಲಿ ಸುಧಾರಣೆ ತರಲು ಜಿಎಸ್ ಟಿ ಜಾರಿ ಮಾಡುವ ಮೂಲಕ ಮಹತ್ವದ ಹೆಜ್ಜೆ ಇಟ್ಟಿದ್ದೀರಾ ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರಕ್ಕೆ ಜಿಎಸ್ ಟಿ ಜಾರಿ ಅತ್ಯಂತ ಸವಾಲಿನ ಕೆಲಸವಾಗಿತ್ತು. ಆರಂಭದಲ್ಲಿ ರಾಜ್ಯಗಳೂ ಕೂಡ ಹಿಂಜರಿಕೆಯಿಂದಲೇ ಜಿಎಸ್ ಟಿ ಜಾರಿಗೊಳಿಸಲು ತೀರ್ಮಾನಿಸಿದವು. ಸ್ವಲ್ಪ ಸಮಯದ ನಂತರ ರಾಜ್ಯಗಳಿಗೂ ಜಿಎಸ್ ಟಿ ಮಹತ್ವದ ಅರಿವಾಯಿತು. ತೆರಿಗೆ ಸಂಗ್ರಹ ಹೆಚ್ಚಳ ಮಾಡುವುದು ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ ಸವಾಲಿನ ಕೆಲಸವಾಗಿತ್ತು. ಜಿಎಸ್ ಟಿ ಕೇವಲ ತೆರಿಗೆಯ ಬುನಾದಿಯಲ್ಲ. ಅದು ಆರ್ಥಿಕ ಬೆಳವಣಿಗೆಯ ಬುನಾದಿ. ನಿಮ್ಮ ನಾಯಕತ್ವದಲ್ಲಿ ಜಿಎಸ್ ಟಿ ಕೌನ್ಸಿಲ್ ಸರ್ವಾನುಮತದ ನಿರ್ಧಾರ ತೆಗೆದುಕೊಳ್ಳುತ್ತಿದ್ದು, ಇದು ನಮ್ಮ ದೇಶದ ಒಕ್ಕೂಟ ವ್ಯವಸ್ಥೆಯನ್ನು ಬಲಗೊಳಿಸುವಲ್ಲಿ ನಿಮ್ಮ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಸಾಮರ್ಥ್ಯವನ್ನು ತೋರಿಸುತ್ತದೆ ಎಂದು ತಿಳಿಸಿದ್ದಾರೆ.

ಜಿಎಸ್ ಟಿ 2 ಮುಂದಿನ ತಲೆಮಾರಿನ ಸುಧಾರಣೆ ಕ್ರಮವಾಗಿದ್ದು, ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ನೀವು ನನಗೆ ಜಿಎಸ್ ಟಿ ಕೌನ್ಸಿಲ್ ನ ಮಂತ್ರಿಗಳ ತಂಡದ ನಾಯಕತ್ವ ವಹಿಸಿಕೊಳ್ಳಲು ಅವಕಾಶ ಕಲ್ಪಿಸಿದ್ದಕ್ಕೆ ನಿಮಗೆ ವಯಕ್ತಿಕವಾಗಿ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಆ ಸಮಯದಲ್ಲಿ ಜಿಎಸ್ ಟಿ ತೆರಿಗೆ ಸುಧಾರಣೆಯಲ್ಲಿ ಸಾಕಷ್ಟು ಸಲಹೆಗಳನ್ನು ನೀಡಲಾಗಿದೆ.

ಪ್ರಸ್ತುತ ನೀವು ವಯಕ್ತಿಕ ಮುತುವರ್ಜಿ ವಹಿಸಿ ಜಿಎಸ್ ಟಿ ಕೌನ್ಸಿಲ್ ನ ಜವಾಬ್ದಾರಿ ತೆಗೆದುಕೊಂಡಿದ್ದು, ಜಿಎಸ್ ಟಿ ತೆರಿಗೆ ಸುಧಾರಣೆ ಮತ್ತು ಸ್ಲ್ಯಾಬ್ ಕಡಿತ ಮಾಡಲು ತೀರ್ಮಾನಿಸಿದ್ದು, ಈ ತೀರ್ಮಾನವನ್ನು ಇಡೀ ದೇಶ ಮುಕ್ತ ಮನಸ್ಸಿನಿಂದ ಸ್ವಾಗತಿಸಿದೆ. ವಿಶೇಷವಾಗಿ ವಾಣಿಜ್ಯೋದ್ಯಮ ಸಮುದಾಯ ಸ್ವಾಗತಿಸಿದೆ. ಇದರ ಪರಿಣಾಮ ಮುಂದಿನ ದಿನಗಳಲ್ಲಿ ಸಾಕಷ್ಟು ವಾಣಿಜ್ಯ ವಹಿವಾಟುಗಳು ಜಿಎಸ್ ಟಿ ವ್ಯಾಪ್ತಿಗೆ ಒಳಪಡಲಿವೆ. ಇದರಿಂದ ತೆರಿಗೆ ಸಂಗ್ರಹ ಹೆಚ್ಚಳವಾಗಲಿದೆ. ಅಲ್ಲದೇ ದೇಶದ ಜಿಡಿಪಿ ಎರಡಂಕಿಗೆ ಹೆಚ್ಚಳವಾಗುವ ನಂಬಿಕೆ ಇದೆ ಎಂದು ತಿಳಿದಿದ್ದಾರೆ. ಭಾರತವನ್ನು ಬಲಿಷ್ಠ ಆರ್ಥಿಕ ಶಕ್ತಿಯನ್ನಾಗಿ ಮಾಡುತ್ತಿರುವ ನಿಮಗೆ ಮತ್ತೊಮ್ಮೆ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಶೀಘ್ರವೇ ನಿಮ್ಮ ಅವಧಿಯಲ್ಲಿಯೇ ಭಾರತ ವಿಶ್ವದ ನಾಲ್ಕನೇ ಆರ್ಥಿಕ ಶಕ್ತಿಯಿಂದ ಮೂರನೇ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮುವ ವಿಶ್ವಾಸ ಇದೆ. ಇದು ನಮ್ಮ ನೆಚ್ಚಿನ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಕನಸಾಗಿರುವ ವಿಕಸಿತ ಭಾರತಕ್ಕೆ ನಾಂದಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

## ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ:ಮಾಹಿತಿ ನೀಡಲು ಸೆ.1 ರವರೆಗೆ ಅವಧಿ ವಿಸ್ತರಣೆ

**ರಾಯಚೂರು,ಆ.28–**ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸರ್ಕಾರದ ಆದೇಶಾನುಸಾರ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳು ಮತ್ತು ಇತರೆ ಜಾತಿ/ಉಪಜಾತಿಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ದಿನಾಂಕ: 22.08.2025 ರಂದು ಪತ್ರಿಕೆಗಳಲ್ಲಿ ಪ್ರಕಟಣೆ ನೀಡಿ ಯಾವುದೇ ಜಾತಿ/ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಅಂತಹ ಅಂಶಗಳ ಬಗ್ಗೆ ಸಲಹೆ, ಸೂಚನೆಗಳು ಇದ್ದಲ್ಲಿ, 07 ದಿನಗಳ ಒಳಗೆ ನೀಡಲು ಕೋರಲಾಗಿತ್ತು.

ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳು ಈ ಅವಧಿಯನ್ನು ವಿಸ್ತರಿಸಲು ಕೋರಿರುವ ಕಾರಣ, ಈ ಬಗ್ಗೆ ಸಲಹೆ/ಸೂಚನೆ ಮನವಿಗಳನ್ನು ನೀಡುವ ಅವಧಿಯನ್ನು ದಿನಾಂಕ: 01.09.2025 ರ ಸಂಜೆ 5.00 ಘಂಟೆಯವರೆಗೆ ವಿಸ್ತರಿಸಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಸಂಗ್ರಹಿಸಲಾದ ಜಾತಿ/ಉಪಜಾತಿಗಳ ಪಟ್ಟಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಾರಂಭವಾಗಲಿರುವ ಸಮೀಕ್ಷೆಗಾಗಿ ಮಾತ್ರ ಉಪಯೋಗಿಸಲಾಗುವುದು.

ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು ಸದಸ್ಯ ಕಾರ್ಯದರ್ಶಿಗಳು,ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16, ಡಿ.ದೇವರಾಜ ಅರಸು ಭವನ,ಮಿಲ್ಲರ್ಸ್ ಟ್ಯಾಂಕ್ ಬಂಡ್ ಪ್ರದೇಶ, ವಸಂತ ನಗರ,ಬೆಂಗಳೂರು ಅಥವಾ kscbcb@gmail.com ಇ–ಮೇಲ್ ವಿಳಾಸಕ್ಕೆ ಕಳುಹಿಸಬಹುದಾಗಿದೆ.ಹೆಚ್ಚಿನವಿವರಗಳಿಗೆ ದೂ.ಸಂಖ್ಯೆ 080–29506668 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಕೊಡಗಿನ ರೋಷನ್ ಜೊತೆ ಹಸೆಮಣೆ ಏರಿದ ಆಂಕರ್ ಅನುಶ್ರೀ



**ಬೆಂಗಳೂರು,ಆ.28–** ನಟಿ ಹಾಗೂ ಆಂಕರ್ ಅನುಶ್ರಿ ಹಾಗೂ ರೋಷನ್ ಅವರ ಕಲ್ಯಾಣ ಮಹೋತ್ಸವವು ಕಗ್ಗಲಿಪುರದ ಬೈಸ್ವಾನ್ ಲೈನ್ ಸ್ಟುಡಿಯೋಸ್ ತಿಟ್ಟಹಳ್ಳಿಯಲ್ಲಿ ಅದ್ದೂರಿಯಾಗಿ ನೆರವೇರಿದೆ.

ಅನುಶ್ರಿ ಅವರ ವಿವಾಹ ಮಹೋತ್ಸವಕ್ಕೆ ಕನ್ನಡ ಚಿತ್ರರಂಗದ ಸೆಲೆಬ್ರಿಟಿಗಳು ಆಗಮಿಸಿ ಶುಭ ಹಾರೈಸಿದ್ದಾರೆ. ತಮ್ಮ ನಿರೂಪಣಾ ಶೈಲಿಯಿಂದಲೇ ತಮದೇ ಆದ ಅಭಿಮಾನಿ ಬಳಗವನ್ನು ಅನುಶ್ರಿ ಅಪ್ಪು ಫ್ಯಾನ್ ಆಗಿರುವ ಕಾರಣ, ಅಪ್ಪು ಹುಟ್ಟುಹಬ್ಬದ ದಿನವೇ ಮದುವೆ ಬಗ್ಗೆ ಸಿಹಿ ಸುದ್ದಿ ಕೊಡ್ತಿನಿ ಎಂದಿದ್ದರು. ಆದರೆ ಅಂದು ಅಭಿಮಾನಿಗಳಿಗೆ ನಿರಾಸೆ ಮಾಡಿದ್ದರು. ಕೊನೆಗೂ ಅನುಶ್ರಿ ಅವರ ಮದುವೆಯ ಬಗ್ಗೆ ಇದ್ದ ಕುತೂಹಲಕ್ಕೆ ಇಂದು ತೆರೆ ಬಿದ್ದಿದೆ.

ಅನುಶ್ರಿ– ರೋಷನ್ ಅವರ ಮನೆಗಳವರು ಒಪ್ಪಿ ಅದ್ದೂರಿಯಾಗಿ ಮದುವೆ ಮಾಡಿದ್ದಾರೆ. ನಿನ್ನೆಯಿಂದಾನೂ ವೈವಾಹಿಕ ಕ್ರಿಯೆಗಳು ನಡೆದಿದ್ದು, ಅರಿಶಿನ ಶಾಸ್ತ್ರ, ಬಳೆ ಶಾಸ್ತ್ರದಲ್ಲಿ ಅನುಶ್ರಿ ಮಿಂದೆದ್ದಿದ್ದಾರೆ.

ರೋಷನ್ ಮೂಲತಃ ಕೊಡಗಿನವರು. ಬೆಂಗಳೂರಿನಲ್ಲಿಯೇ ಉದ್ಯಮಿಯಾಗಿದ್ದಾರೆ. ಇಂದು ಬೆಳಗ್ಗೆ 10.56ಕ್ಕೆ ರೋಷನ್, ಅನುಶ್ರಿ ಅವರಿಗೆ ಮಾಂಗಲ್ಯ ಧಾರಣೆ ಮಾಡಿದ್ದಾರೆ.

## ಶ್ರೀ ನಂದ ವಸತಿ ಶಾಲೆ ವಿದ್ಯಾರ್ಥಿಗಳು ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ




**ಬಳ್ಳಾರಿ, ಆ.28–** ನಗರದ ಕ್ರೀಡಾಂಗಣದಲ್ಲಿ ನಡೆದ ಪ್ರಾಥಮಿಕ ಪಶ್ಚಿಮವಲಯದ ಕ್ಲಸ್ಟರ್ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾಗಿ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸತ್ಯಸಾಯಿ. ರನ್ನಿಂಗ್,–600ಟ, 400ಟ, 200ಟ ಬಾಲಕರ ವಿಭಾಗದಲ್ಲಿ ಪ್ರಥಮ, ಕಾವ್ಯ ಶ್ರೀ ಕೆ. ರನ್ನಿಂಗ್,–600ಟ, ಪ್ರಥಮ ಸ್ಥಾನ 400ಟ ನಲ್ಲಿ ದ್ವಿತೀಯ ಸ್ಥಾನ , ಜಿತೇಂದ್ರ,– ಹಾಡಲ್ಸ್ ದ್ವಿತೀಯ ಸ್ಥಾನ,ತೇಜಸ್ವಿನಿ

100 ಟ ರನ್ನಿಂಗ್ ನಲ್ಲಿ ತೃತೀಯ ಸ್ಥಾನ,

ಪೃಥ್ವಿರಾದ್ದಜಿಗಿತ ದಲ್ಲಿ ತೃತೀಯ ಸ್ಥಾನ ಹಾಗೂ ರಿಲೇ ಆಟದಲ್ಲಿ ಕಾವ್ಯ ಶ್ರೀಕೆ,ಐಶ್ವರ್ಯ,ದೇವಿಕಾ ಶ್ರಾವ್ಯ ಕೃತಿಯ ಸ್ಥಾನ ಪಡೆದಿದ್ದಾರೆ.ಮತ್ತು

ಸತ್ಯಸಾಯಿ ಮತ್ತು ಕಾವ್ಯ ಶ್ರೀ ಕೆ ಮುಂಬರುವ ತಾಲೂಕ ಮಟ್ಟದ ಕ್ರೀಡಾ ಕೂಟಕ್ಕೆ ಆಯ್ಕೆ ಯಾಗಿದ್ದಾರೆ. ಶ್ರೀ ನಂದ ವಸತಿ ಶಾಲೆ ಮುಖ್ಯ ಗುರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H